ಸಂಪುಟ : 10 ಸಂಚಿಕೆ: 140 ಪುಟ : 4+2 ಬೆಲೆ: 3.00 ರವಿವಾರ ಜುಲೈ 06 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 140 Pages : 4+2 Price : 3.00 Sunday July 06 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜನಪದ ಕಲೆ ಹಿರಿಯರ ಕೊಡುಗೆ

■ವಿಜಯಸಾಕ್ಷಿ ಸುದ್ದಿ, ಕೊಣ್ಣೂರ


ಜನಪದ ಕಲೆ ಎಂಬುವದು ನಮ್ಮ ಹಿರಿಯರು ಕೊಟ್ಟ ಕೊಡುಗೆಯಾಗಿದೆ. ನಮ್ಮ ನಾಡಿನ ಸಂಸ್ಕೃತಿ ಸಂಸ್ಕಾರಗಳನ್ನು ಬೆಳಸುವ ನಿಟ್ಟಿನಲ್ಲಿ ಜನಪದ ಕಲೆಯು ತನ್ನದೆಯಾದ ಇತಿಹಾಸವನ್ನು ಉಳಿಸಿ ಬೆಳಸಿಕೊಂಡು ಬಂದಿದೆ ಎಂದು ಉಪನ್ಯಾಸಕರಾದ ಎಚ್ ಎಮ್ ತಳವಾರ ಹೇಳಿದರು. ಅವರು ಗ್ರಾಮದ ಕನಕದಾಸ ಬಾಲಕೀಯರ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಜೈ ಕಿಸಾನ ಜನಪದ ಕಲಾ ಬಳಗ ಕೊಣ್ಣೂರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಕಾರದಿಂದ ಜನಪದ ಗೀತ ಗಾಯನ ಕಾರ್ಯಕ್ರಮ ಹಾಗೂ ಜನಪದ ಕುರಿತು ನಡೆದ ವಿಚಾರ ಗೋಷ್ಠಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಉಪನ್ಯಾಸ ನೀಡಿದರು.

ಜನಪದ ಕಲೆಯ ಕಲಾ ಪ್ರಕಾರಗಳು ಮುಖ್ಯವಾಗಿವೆ. ಬೆಳಗ್ಗೆ ಅಂಗಳ ಹೂಡಿಯುವದರಿಂದ ಪ್ರಾರಂಭವಾಗಿ ನಮ್ಮ ನಾಡಿನ ಹಬ್ಬ ಹರಿದಿನಗಳಲ್ಲಿಯೂ ಸಹ ಜನಪದ ಕಲೆಗಳು ಮೂಡಿ ಬರುತ್ತವೆ. ಸೋಬಾನ ಪದ ಬೀಸುವ ಕಲ್ಲಿನ ಪದ , ಹಾಗೇ ದೇವರ ನಾಮವನ್ನು ಹೊತ್ತಿಕೊಂಡು ಹಾಡುವುದು ಕೂಡ ನಮ್ಮ ಕಲೆಯ ಪ್ರಕಾರಗಳಾಗಿವೆ ಎಂದರು. ಈ ಸಂದರ್ಭದಲ್ಲಿ ಅಕ್ಕಮ್ಮ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ಅಧ್ಯಕ್ಷತೆಯನ್ನು ಗ್ರಾ.ಪಂ ಸದಸ್ಯೆ ಹುಸೇನಬಿ ಮೌ ಬುರಡಿ ವಹಿಸಿದ್ದರು. ಎಸ್.ಎಚ್. ಬೆನ್ನೂರ, ಪಿ.ಕೆ. ಚಂದಣ್ಣವರ ಗ್ರಾಮ ಪಂಚಾಯತ್ ಸದಸ್ಯರು, ಕಲಾ ತಂಡದ ಅಧ್ಯಕ್ಷರೂ ಆದ ಗೀತಾ.ಪ.ಚಂದಣ್ಣವರ, ಕಾರ್ಯದರ್ಶಿ ಬೇಗಂ ದಾ ಬಾಳಪ್ಪನವರ, ಸದಸ್ಯರಾದ ಸೌಂದರ್ಯ ಚಂದಣ್ಣವರ, ಫಾತಿಮಾ ಬಾಳಪ್ಪನವರ, ಸಹನಾ ಹಡಪದ, ವೈಷ್ಣವಿ ಮಾನೆ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಎನ್.ಎಮ್.ಕಾಂಬಳೆ ನಿರೂಪಿಸಿದರು ಎ.ಎಲ್. ಕುಲಕರ್ಣಿ ವಂದಿಸಿದರು.

## ಕರ್ತವ್ಯ ನಿರತ ಎಎಸ್ಐ ಹೃದಯಘಾತಕ್ಕೆ ಬಲಿ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ/ಹುಬ್ಬಳ್ಳಿ



ಹೃದಯಾಘಾತದಿಂದ ಕರ್ತವ್ಯ ನಿರತ ಎಎಸ್ಐಒಬ್ಬರು ಸಾವನಪ್ಪಿರುವ ಘಟನೆ ಬೆಳಗಾವಿ ಜಿಲ್ಲೆಯ ಗೋಕಾಕ್‌ನಲ್ಲಿ ನಡೆದಿದೆ.

ಮೂಲತಃ ಗದಗ ಜಿಲ್ಲೆಯ ಕೋಟುಮಚಗಿ ಗ್ರಾಮದ ಲಾಲ್‌ಸಾಬ ಮೀರಾನಾಯ್ಕ (55) ಮೃತ ಎಎಸ್ಐಯಾಗಿದ್ದು, ಹುಬ್ಬಳ್ಳಿಯ ನವನಗರ ಎಪಿಎಂಸಿ ಠಾಣೆಯಲ್ಲಿ ಎಎಸ್ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಮೀರಾನಾಯ್ಕ ಅವರನ್ನು ಕಳೆದ ಐದು ದಿನಗಳಿಂದ ಗೋಕಾಕ್‌ನ ಮಹಾಲಕ್ಷ್ಮಿ ಜಾತ್ರೆಯ ಬಂದೋಬಸ್ತಿಗಾಗಿ ನಿಯೋಜನೆ ಮಾಡಲಾಗಿತ್ತು.

ಜುಲೈ 5ರಂದು ಬೆಳಗ್ಗೆ ಮೀರಾನಾಯ್ಕ್ ಅವರು ತೀವ್ರ ಎದೆನೋವಿನಿಂದ ಕುಸಿದು ಬಿದ್ದರು. ತಕ್ಷಣವೇ ಅವರನ್ನು ಇತರೆ ಸಿಬ್ಬಂದಿ ಗೋಕಾಕ್ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದರು.

ಆದರೆ ವೈದ್ಯರು ಪರೀಕ್ಷಿಸಿದಾಗ ಅವರು ಈಗಾಗಲೇ ಮೃತಪಟ್ಟಿರುವುದಾಗಿ ದೃಢಪಡಿಸಿದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು- ಬಳಗವಿದೆ.

### ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ನಗದು ಬಹುಮಾನ ವಿತರಣಾ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಕಲಿಕೆಯ ಅವಧಿಯಲ್ಲಿ ಉತ್ತಮ ಜ್ಞಾನ ಹೊಂದಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳೇ ನಮ್ಮ ದೇಶದ ಭವ್ಯ ಭವಿಷ್ಯವಾಗಿದ್ದಾರೆ. ಓದುವ ಹಂತದಲ್ಲಿ ಉತ್ತಮವಾಗಿ ಅಧ್ಯಯನ ಮಾಡಿ ಜೀವನದಲ್ಲಿ ಯಶಸ್ಸು ನಿಮ್ಮದಾಗಿಸಿಕೊಳ್ಳಿ ಎಂದು ರಾಜ್ಯದ ಕಾನೂನು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕರೆ ನೀಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶನಿವಾರ ಮಲ್ಲಸಮುದ್ರದ ಮೊರಾರ್ಜಿ ದೇಸಾಯಿ ವಸತಿಯುತ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದಲ್ಲಿ 2024–25ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನಗುದು ಬಹುಮಾನ ವಿತರಿಸಿ ಸಚಿವರು ಮಾತನಾಡಿದರು.

ಭಾರತದ ಭವ್ಯ ಭವಿಷ್ಯ ನಿರ್ಮಾಣದಲ್ಲಿ ಇಂದಿನ ಯುವ ಪೀಳಿಗೆ, ವಿದ್ಯಾರ್ಥಿಗಳ ಪಾತ್ರ ಅಪಾರವಿದೆ. ಕಲಿಯುವ ಅವಧಿಯನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಜ್ಞಾನ ಹೊಂದಿ. ಮೊರಾರ್ಜಿ ದೇಸಾಯಿಯವರು ಇಂದಿನ ಬಾಂಬೆ ರಾಜ್ಯದ ಮುಖ್ಯಮಂತ್ರಿಗಳಾಗಿ, ಆರ್ಥಿಕ



ಸಚಿವರಾಗಿ ಅಲ್ಲದೆ ದೇಶದ ಪ್ರಧಾನಿಯಾಗಿ ಕಾರ್ಯನಿರ್ವಹಿಸಿದ್ದಾರೆ. ತಮ್ಮ ಆಡಳಿತ ಅವಧಿಯಲ್ಲಿ ಅನೇಕ ಮಹತ್ವದ ನಿರ್ಣಯಗಳನ್ನು ಕೈಗೊಳ್ಳುವ ಮೂಲಕ ಸುಭದ್ರ ರಾಷ್ಟ್ರಕ್ಕಾಗಿ ಕಾರ್ಯನಿರ್ವಹಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ನಿರಂತರವಾಗಿ ಪ್ರಾಮಾಣಿಕ ಪ್ರಯತ್ನ ಇದ್ದಲ್ಲಿ ಯಶಸ್ಸು ನಿಮ್ಮದಾಗಲಿದೆ. ಶೇ. 85ಕ್ಕಿಂತ ಅಧಿಕ ಫಲಿತಾಂಶ ಪಡೆಯುವದು ಸಣ್ಣ ಮಾತಲ್ಲ. ಎಲ್ಲರೂ ಉತ್ತಮ ಸಾಧನೆಗೈದಿದ್ದೀರಿ ಎಂದರಲ್ಲದೆ, ಇದಕ್ಕೆ ಕಾರಣರಾದ ಎಲ್ಲಾ ಬೋಧಕ–ಬೋಧಕೇತರ ಸಿಬ್ಬಂದಿಗಳಿಗೆ ಅಭಿನಂದನೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಉತ್ತಮ ಫಲಿತಾಂಶಕ್ಕೆ ಕಾರಣರಾದ ಮಲ್ಲಸಮುದ್ರ ಪದವಿಪೂರ್ವ ಕಾಲೇಜಿನ ಬೋಧಕ ಸಿಬ್ಬಂದಿಗಳನ್ನು ಸಚಿವರು ಸನ್ಮಾನಿಸಿದರು. ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ರವಿ ಗುಂಜೀಕರ, ಸಿದ್ದು ಪಾಟೀಲ ಸೇರಿದಂತೆ ಕಾಲೇಜಿನ ಪ್ರಾಚಾರ್ಯರು, ಅಸುಂಡಿ ಗ್ರಾ.ಪಂ ಅಧ್ಯಕ್ಷರು, ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

> 2024–25ನೇ ಸಾಲಿನಲ್ಲಿ ಮಲ್ಲಸಮುದ್ರ ಶಾಲೆಯಲ್ಲಿ 80 ವಿದ್ಯಾರ್ಥಿಗಳ ಪೈಕಿ 43 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಪಡೆಯುವ ಮೂಲಕ ಸರ್ಕಾರದ 10 ಸಾವಿರ ರೂ ನಗದು ಬಹುಮಾನಕ್ಕೆ ಭಾಜನರಾಗಿದ್ದೀರಿ. ಅಲ್ಲದೆ, ಶೇ. 100ರಷ್ಟು ಫಲಿತಾಂಶ ಪಡೆದಿದ್ದು ಅಭಿನಂದನೀಯ. ರಾಜ್ಯದ ಕ್ರೈಸ್ ಸಂಸ್ಥೆಯಡಿ 78 ಕಾಲೇಜುಗಳಿದ್ದು, ಮಲ್ಲಸಮುದ್ರದ ಕಾಲೇಜು ರಾಜ್ಯದಲ್ಲಿಯೇ 3ನೇ ಸ್ಥಾನದಲ್ಲಿರುವುದು ಹೆಮ್ಮೆಯ ವಿಷಯ. ಮುಂದಿನ ವರ್ಷ ಇಲ್ಲಿ ಕಲಿಯುವ ಎಲ್ಲ ಮಕ್ಕಳು ಸಹ ಡಿಸ್ಟಿಂಕ್ಷನ್ ಪಡೆದು ಉತ್ತೀರ್ಣರಾಗಬೇಕು. ಈ ನಿಟ್ಟಿನಲ್ಲಿ ಕಾಲೇಜಿನ ಬೋಧಕ ಸಿಬ್ಬಂದಿ ಕಾರ್ಯನಿರ್ವಹಿಸುವಂತಾಗಲಿ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

### ಪೊಲೀಸ್ ಮೀಸಲು ಕಚೇರಿ ಮೈದಾನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗೆ ಭೂಮಿಪೂಜೆ

# ಮಲ್ಲಸಮುದ್ರ ರಸ್ತೆ ನಿರ್ಮಾಣ ರಾಜ್ಯಕ್ಕೆ ಮಾದರಿಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಲ್ಲಸಮುದ್ರದ ಪೊಲೀಸ್ ಮೀಸಲು ಮೈದಾನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಯು ಗುಣಮಟ್ಟದಲ್ಲಿ ರಾಜ್ಯಕ್ಕೆ ಮಾದರಿಯಾಗುವಂತೆ ನಿರ್ಮಿಸಬೇಕು ಎಂದು ರಾಜ್ಯದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ಶನಿವಾರ ಪೊಲೀಸ್ ಇಲಾಖೆ ಆಯೋಜಿಸಿದ್ದ ಗದಗಿನ ಮಲ್ಲಸಮುದ್ರದ ಪೊಲೀಸ್ ಮೀಸಲು ಕಚೇರಿ ಮೈದಾನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಯಿಂದ 'ಥರ್ಡ್ ಐ' ಯೋಜನೆ ಜಾರಿಗೊಳಿಸುವ ಮೂಲಕ ಜಿಲ್ಲಾದ್ಯಂತ ಕಾನೂನು ಪಾಲನೆಗೆ ಸಹಕಾರಿಯಾಗಿದೆ. ಸಾರ್ವಜನಿಕರು ನಿಯಮ ಪಾಲನೆಯೊಂದಿಗೆ ಅಪಘಾತಗಳ ಸಂಖ್ಯೆ ಕಡಿಮೆಯಾಗಿದೆ. ವಿವಿಧ ಅಪರಾಧ ಪ್ರಕರಣಗಳನ್ನು ಭೇದಿಸಲೂ ಪೊಲೀಸರಿಗೆ ಸಹಕಾರಿಯಾಗಿದೆ. ಆ ಮೂಲಕ ಪ್ರಕರಣಗಳ



ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇಂದು ಪೊಲೀಸ್ ಇಲಾಖೆಗೆ ಎರಡು ವಾಹನಗಳನ್ನು ಹಸ್ತಾಂತರಿಸಲಾಗಿದೆ. ಒಂದು ವಾಹನವನ್ನು ರಾಜ್ಯ ಖನಿಜ ಅಭಿವೃದ್ಧಿ ನಿಗಮದಿಂದ ಹಾಗೂ ಇನ್ನೊಂದನ್ನು ವಿ.ಪ ಸದಸ್ಯ ಎಸ್.ವಿ. ಸಂಕನೂರರ ಪ್ರದೇಶಾಭಿವೃದ್ಧಿ ಅನುದಾನದಿಂದ ಒದಗಿಸಿರುವುದು ಇಲಾಖೆಗೆ ಸಹಕಾರಿಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರಸ್ತೆ ನಿರ್ಮಾಣಕ್ಕೆ ತೊಂದರೆಯಾಗಿದ್ದ ಅಡೆತಡೆಗಳನ್ನು ನಿವಾರಿಸಿದ ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿಗಳಿಗೆ ಸಚಿವರು ಪೊಲೀಸ್ ಇಲಾಖೆಯಿಂದ ಅಭಿನಂದನಾ ಪತ್ರ ನೀಡಿ ಗೌರವಿಸಿದರು. ರಸ್ತೆ ನಿರ್ಮಾಣಕ್ಕೆ ಸಹಕಾರ ನೀಡಿದ ಗಣ್ಯರಿಗೆ ಗೌರವ ಸಮರ್ಪಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಉಪಸ್ಥಿತರಿದ್ದರು.

> ಜಿಲ್ಲಾ ಪೊಲೀಸ್ ಪರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅತಿಥಿಗಳನ್ನು ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿ, 1.6 ಕಿಲೋಮೀಟರ್ ರಸ್ತೆ ನಿರ್ಮಾಣಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಒಂದು ಕೋಟಿ ರೂ, ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ 50 ಲಕ್ಷ ರೂ ನೀಡುವ ಮೂಲಕ ರಸ್ತೆ ನಿರ್ಮಾಣಕ್ಕೆ ಸಚಿವ ಎಚ್. ಕೆ. ಪಾಟೀಲ್ ಅನುದಾನ ಒದಗಿಸಿದ್ದಾರೆ ಎಂದರು.

## ಸಚಿವ ಎಚ್.ಕೆ. ಪಾಟೀಲರಿಂದ ರಾಮೇಶ್ವರ ದೇವಸ್ಥಾನ ವೀಕ್ಷಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸೋಮೇಶ್ವರ ರಸ್ತೆಯಲ್ಲಿರುವ ಐತಿಹಾಸಿಕ ರಾಮೇಶ್ವರ ದೇವಸ್ಥಾನಕ್ಕೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ. ಪಾಟೀಲ ಶನಿವಾರ ಭೇಟಿ ನೀಡಿ ವೀಕ್ಷಿಸಿದರು.

ಗದಗ ನಗರ ಸೇರಿದಂತೆ ಜಿಲ್ಲೆಯಲ್ಲಿ ಅನೇಕ ಐತಿಹಾಸಿಕ, ಮಹತ್ವದ ದೇವಸ್ಥಾನಗಳಿವೆ. ಅವುಗಳ ಜೀರ್ಣೋದ್ಧಾರ ಮಾಡುವ ಮೂಲಕ ಯುವಪೀಳಿಗೆಗೆ ಇತಿಹಾಸದ ಪರಿಚಯ ಮಾಡಿಸಬೇಕಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

ರಾಮೇಶ್ವರ ದೇವಸ್ಥಾನದ ಇತಿಹಾಸ ಸೇರಿದಂತೆ ಎಲ್ಲ ವಿಷಯಗಳ ಕುರಿತು ತಿಳಿಸಿಕೊಡುವ ಪ್ರಯತ್ನಗಳಾಗಬೇಕಿದೆ. ಸರ್ಕಾರದಿಂದ ಜೀರ್ಣೋದ್ಧಾರ ಕೈಗೊಳ್ಳುವ ಮೂಲಕ ಮೂಲ ದೇವಸ್ಥಾನದ ರಚನೆಗೆ ತೊಂದರೆ–ಯಾಗದಂತೆ ಮಾಡಲು ಪ್ರಯತ್ನ ಸಾಗಿದೆ. ದೇವಸ್ಥಾನ ಪ್ರದೇಶದ ಸಾರ್ವಜನಿಕರು ಸೂಕ್ತ ಸಹಕಾರ ನೀಡಬೇಕು ಎಂದು ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಪ್ರಭು ಬುರಬುರೆ, ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ರವಿ ಮೂಲಿಮನಿ, ಫಾರೂಕ್ ಹುಬ್ಬಳ್ಳಿ, ಅ.ದ. ಕಟ್ಟಿಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಮೇಕೆದಾಟು ಯೋಜನೆ ಕುರಿತು ಕೇಂದ್ರ ಸಚಿವ ಕುಮಾರಸ್ವಾಮಿ ಹೇಳಿಕೆಗೆ ಸಚಿವ ಎಚ್ ಕೆ ಪಾಟೀಲ ಆಕ್ರೋಶ!

# ಮಹದಾಯಿಗೆ ಒಪ್ಪಿಗೆ ಕೊಡ್ಸಿ

■ವಿಜಯಸಾಕ್ಷಿ ಸುದ್ದಿ, ಗದಗ

ನಾನು ಐದೇ ನಿಮಿಷದಲ್ಲಿ ಪ್ರಧಾನ ಮಂತ್ರಿಗಳಿಂದ ಮೇಕೆದಾಟು ಯೋಜನೆಗೆ ಒಪ್ಪಿಗೆ ಕೊಡಿಸುತ್ತೇನೆ. ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಶಕ್ತಿಯಿದ್ದರೆ ತಮಿಳುನಾಡಿನ ತಮ್ಮ ಮೈತ್ರಿ ಪಕ್ಷವನ್ನು ಮೇಕೆದಾಟು ಯೋಜನೆಗೆ ಒಪ್ಪಿಸಲಿ ಎಂಬ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಹೇಳಿಕೆಗೆ ಕಾನೂನು ಸಚಿವ ಎಚ್ ಕೆ ಪಾಟೀಲ್ ಆಕ್ರೋಶ ಹೊರ ಹಾಕಿದ್ದಾರೆ.

ಈ ಕುರಿತು ಮಾಧ್ಯಮದವರ ಜೊತೆ–ಗೆ ಮಾತನಾಡಿದ ಅವರು, ಹೆಚ್ ಡಿ ಕುಮಾರಸ್ವಾಮಿ ಅವರೇ ತಮಿಳುನಾಡಿನ ಒಪ್ಪಿಗೆ ಪಡೆಯಿರಿ ಎನ್ನುವ ನೀವು, ಮಹದಾಯಿಗೆ ಒಪ್ಪಿಗೆ ಕೊಡಿಸಬಹುದಲ್ವಾ..? ಗೋವಾದಲ್ಲಿ ನಿಮ್ದೆ ಸರ್ಕಾರ




ಇದೆ ತಾನೆ. ಹಾಗಿದ್ರೆ ನಮಗೆ ಮಹದಾಯಿಗೆ ಒಪ್ಪಿಗೆ ಕೊಡಿಸಿ ಎಂದು ಸವಾಲ್ ಹಾಕಿದರು.

ಪ್ರಧಾನಿ ಮೋದಿ ಅವರನ್ನು ನೀವೇಕೆ ಒಪ್ಪಿಸ್ತೀರಿ, ಅವರ ಕನ್ಸಂಟ್ ಬೇಕಾ ನಿಮ್ಗೆ ಅಂತ ಗರಂ ಆದರು. ನೀವು ಆದೇಶ ಮಾಡ್ರಿ. ಎಲ್ಲಾದಕ್ಕೂ ಅವ್ರ ಒಪ್ಪಿಗೆ ತಗೋತೀರಾ. ಮಿತ್ರ ಪಕ್ಷಕ್ಕೆ ಒತ್ತಾಯಿಸಿ ಅಂತೀರಲ್ಲಾ.. ಡಿಎಂಕೆ ಒಪ್ಪಿಗೆ ತೆಗೆದುಕೊಂಡೇ ಎಲ್ಲಾ ಮಾಡ್ತೀರಾ. ನಿಮಗೆ ಆದೇಶ ಮಾಡಲು ಬರಲ್ವಾ ಅಂತ ಕಿಡಿಕಾರಿದರು.

ಅಂತರರಾಜ್ಯ ನೀರಿನ ವಿವಾದ ಕಾನೂನು ಪ್ರಕಾರ ಕಾನೂನು ಪಾಸ್ ಮಾಡಿ ಕೊಟ್ಟಿದ್ದೀವಿ. ಅದು ಯಾ–ಕೆ ಕೊಟ್ಟಿದ್ದೀವಿ, ಒಪ್ಪಿಗೆ ತರಬೇಕು ಅಂತ. ಅದರಲ್ಲಿ ಪ್ರಸ್ತಾಪ ಇದೆಯಾ ಅಂತ ನೋಡಿ. ಗೋವಾದಲ್ಲಿ ನಿಮ್ದೆ ಸರ್ಕಾರ ಇದೆ. ಹಾಗಿದ್ರೆ ನಮ್ಗೆ ಮಹದಾಯಿಗೆ ಒಪ್ಪಿಗೆ ಕೊಡ್ಸಿ ಅಂತ ಸವಾಲ್ ಹಾಕಿದರು. ನಿಮಗೆ ಏನಾದರೂ ತೊಂದ–ರೆ ಇದ್ರೆ. ಅವರದ್ದು ಒಪ್ಪಿಗೆ ತಗೊಂಡು ಬನ್ನಿ. ಮಹದಾಯಿ ವಿಚಾರದಲ್ಲಿ ಯಡಿಯೂರಪ್ಪ ಪತ್ರ ತೋರಿಸಿದ್ರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪತ್ರಿಕಾ ಪರಿಷತ್ ಮಾಡಿದ್ರು. ಅಮಿತ್ ಶಾ ಬಂದಾಗ್ ಏನೇನಾಯ್ತು ಅನ್ನೋದು ಗೊತ್ತಿದೆ. ಅಲ್ಲಿ ಒಪ್ಪಿಗೆ ತಗೊಂಡು ಬರ್ತಾರಾ. ಅಗತ್ಯ ಇದೆಯಾ ಅಂತ ಕಿಡಿಕಾರಿದರು. ಪ್ರಧಾನಿ ಮೋದಿ ಅವ್ರಿಗೆ ಗೋವಾ ಒಪ್ಪಿಗೆ ತಗೊಂಡು ಬನ್ನಿ ಅಂತ ಹೇಳಲ್ಲಾ ನಾನು. ಕುಮಾರಸ್ವಾಮಿ ಅವ್ರೇ ತಗೊಂಡು ಬನ್ನಿ ಎನ್ನಲ್ಲ. ಅದು ಅವಶ್ಯಕತೆ ಇಲ್ಲ. ಅವಶ್ಯಕತೆ ಇಲ್ಲಾ ಅಂದ್ರೆ ಯಾಕೇ ಹೋಗ್ತೀರಾ ಎಂದು ಪ್ರಶ್ನಿಸಿದರು.

### ಪ್ರಾಮಾಣಿಕವಾಗಿ ಜನಗಣತಿ ಸರ್ವೆ ನಡಿತಾಯಿದೆ

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಜನಗಣತಿ ವಿಚಾರವಾಗಿ ಮಾತನಾಡಿ, ನಾಗಮೋಹನ ದಾಸ್ ವರದಿ ಇನ್ನೇನು ತನ್ನ ಕೆಲಸ ಪೂರ್ಣ ಮಾಡಲು ಬಂದಿದೆ. ಅವರೇ ಹೇಳಿದ ಹಾಗೇ 10 ಲಕ್ಷ ಜನ ಇನ್ನೂ ಮಾಹಿತಿ ಕೊಟ್ಟಿಲ್ಲ. ಆ ಕುರಿತು ವಿಶೇಷ ಕಾರ್ಯಕ್ರಮ ರೂಪಿಸುತ್ತಿದ್ದಾರೆ. ಇಷ್ಟಾದ ಮೇಲೆ ನೀವು ಸುದ್ದಿ ಸೃಷ್ಟಿ ಮಾಡುವಂತಹದ್ದು ಏನು ಇಲ್ಲ. ಉತ್ತಮವಾಗಿ, ವೈಜ್ಞಾನಿಕವಾಗಿ, ಪ್ರಮಾಣಿಕ ಎಕ್ಸೈಜ್ ನಡೆದಿದೆ. ಅದು ಯಶಸ್ವಿಯಾಗಲು ಬಂದಾಗ, ಅನವಶ್ಯಕ ಪ್ರಶ್ನೆ ಕೇಳೋದು ಆರೋಗ್ಯಕರ ಅಲ್ಲ. ಸಮರ್ಪಕವಾಗಿ ಅತ್ಯಂತ ಪ್ರಾಮಾಣಿಕವಾಗಿ ಸರ್ವೆ ನಡಿತಾಯಿದೆ ಎಂದರು.

# 'ಶ್ರೀ ಗುರು ರೇವಣಸಿದ್ಧೇಶ್ವರ ಸದ್ಭಾವನಾ ಸಿರಿ' ಪ್ರಶಸ್ತಿ ಪ್ರದಾನ ಸಮಾರಂಭ ಜುಲೈ 10ಕ್ಕೆ



■ವಿಜಯಸಾಕ್ಷಿ ಸುದ್ದಿ, ಕಡೇನಂದಿಹಳ್ಳಿ

ಕಡೇನಂದಿಹಳ್ಳಿ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದ ಶ್ರೀ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳವರ ದ್ವಾದಶ ಪಟ್ಟಾಧಿಕಾರ ವರ್ಧಂತಿ ವರ್ಷಾಚರಣೆ ಪ್ರಯುಕ್ತ 'ಶ್ರೀ ಗುರು ರೇವಣಸಿದ್ಧೇಶ್ವರ ಸದ್ಭಾವನಾ ಸಿರಿ ಪ್ರಶಸ್ತಿ' ಪ್ರದಾನ ಹಾಗೂ ಗುರು ಪೂರ್ಣಿಮಾ ಧರ್ಮ ಸಮಾರಂಭ ಜುಲೈ 10ರಂದು ಸಂಜೆ 4.30ಕ್ಕೆ ಜರುಗಲಿದೆ.

ಪ್ರಶಸ್ತಿ ಪ್ರದಾನ ಮಾಡಲು ಶಿವಮೊಗ್ಗ ಸಂಸದರಾದ ಬಿ.ವೈ. ರಾಘವೇಂದ್ರ ಹಾಗೂ ಹಿರೇಕೆರೂರ ಶಾಸಕರಾದ ಯು.ಬಿ. ಬಣಕಾರ ಆಗಮಿಸುವರು. ಮುಖ್ಯ ಅತಿಥಿಗಳಾಗಿ ಕಡೇನಂದಿಹಳ್ಳಿ ಶ್ರೀ ಹೋಳಿಹಂಪೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಬಸವರಾಜಪ್ಪ ಚನ್ನಳ್ಳೇರ ಹಾಗೂ ಗ್ರಾ.ಪಂ ಅಧ್ಯಕ್ಷ ಲಿಂಗರಾಜ ಚನ್ನಳ್ಳಿ ಭಾಗವಹಿಸುವರು.

ದುಗ್ಲಿ-ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯ ಸ್ವಾಮಿಗಳು, ಕನ್ನೂರು-ಸಿಂಧನೂರು ಸೋಮನಾಥ ಶಿವಾಚಾರ್ಯ ಸ್ವಾಮಿಗಳು, ಕಾರ್ಜುವಳ್ಳಿ ಸದಾಶಿವ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸುವರು.

ರಾಜಕೀಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಮಾಜಿ ಶಾಸಕ ಬಿ.ಹೆಚ್. ಬನ್ನಿಕೋಡ, ಅಂಬಾರಗೊಪ್ಪದ ಮಾಜಿ ಪ್ರಧಾನರಾದ ಎನ್.ಶೇಖರಪ್ಪ, ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಶಿಕಾರಿಪುರದ ಕೊಂಟೋಜಿರಾವ್ ಆರ್.ಬಿಸಲಹಳ್ಳಿ ಜೀವರಾಜ ಛತ್ರದ, ಕಲಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಶಿಕಾರಿಪುರದ ಡಾ. ಈಶ್ವರ್‌ರಾವ್ ಎ., ಕುಡುಪಲಿಯ ರಮ್ಯಾ ವಾಗೀಶ ಹಿರೇಮಠ, ಕ್ರೀಡಾ ಕ್ಷೇತ್ರದ ಬನ್ನಿಹಟ್ಟಿಯ ಮಂಜುಳಾ ಲಮಾಣಿ, ಶಿಕಾರಿಪುರದ ಅಂಕಿತ, ಆರಕ್ಷಕ ಕ್ಷೇತ್ರದ ಹಿರೇಕೆರೂರು ವೃತ್ತ ನಿರೀಕ್ಷಕ ಬಸವರಾಜ ಪಿ.ಎಸ್., ಶಿಕಾರಿಪುರದ ಆರಕ್ಷಕ ಶಂಕರಗೌಡ ಎನ್.ಹೆಚ್ ಹಾಗೂ ಪರಿಸರ ಸಂರಕ್ಷಣಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಶಿಕಾರಿಪುರದ ಪರೋಕಾರಂ ಕುಟುಂಬ ಮತ್ತು ಬೆಲವಂತನಕೊಪ್ಪದ ವನ್ಯಜೀವಿ ಸಂರಕ್ಷಕ ಅರುಣ್ ಕುಮಾರ್ ಜಿ.ಎನ್ ಇವರಿಗೆ ಶ್ರೀ ಗುರು ರೇವಣಸಿದ್ಧೇಶ್ವರ ಸದ್ಭಾವನಾ ಸಿರಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಇದೇ ಸಂದರ್ಭದಲ್ಲಿ ಹೊಸನಗರದ ಮಂಜುನಾಥ ಭಟ್, ಶಿಕಾರಿಪುರದ ಟಿ.ಎಸ್. ದೇವೇಂದ್ರಪ್ಪ, ಬೆಂಗಳೂರಿನ ಅರುಣಕುಮಾರ್ ಎಂ., ಶಿವಲಿಂಗಯ್ಯ ಅಲ್ಲಯ್ಯನವರಮಠ, ವೀಣಾ ಹಿರೇಮಠ, ಅಂಕಿತ ಮತ್ತು ವೇ. ಗುರುಶಾಂತಯ್ಯ ಕಲ್ಯಾಣಮಠ ಇವರಿಗೆ ಗೌರವ ಗುರುರಕ್ಷೆ ನೀಡಲಾಗುವುದು ಎಂದು ಶ್ರೀ ಗುರು ರೇವಣಸಿದ್ದೇಶ್ವರ ಜನಕಲ್ಯಾಣ ಟ್ರಸ್ಟಿನ ಪ್ರಕಟಣೆ ತಿಳಿಸಿದೆ.

### ರಾಜ್ಯದ ಗಡಿ ದಾಟಿ ರಾಷ್ಟ್ರಮಟ್ಟದ ಉತ್ಸವಗಳಲ್ಲೂ ಕಾಣಿಸಿಕೊಂಡ 'ಅಲಾಯಿ ಹೆಜ್ಜೆ'

# ಮೊಹರಮ್ ಹೆಜ್ಜೆಗೆ ಸಾಮರಸ್ಯದ ಗೆಜ್ಜೆ

'ಕುಂತಿರು ಜನಾ । ಮಾಡುವೆ ಶರಣಾ
ಕಲಕಲ ಮಾಡಬ್ಯಾಡ್ರಿ । ಕೇಳರಿ ಸುಮ್ಮನಾ
ಸಭಾ ಕೂಡೀರಿ ಏನ ಚಂದಾ
ಅನುಭಾವ ತಗದೇವ ಒಂದಾ
ಸುರಿದಾಂಗ ಮಲ್ಲಿಗೆ ಚಂದಾ ।
ಕೇಳಿರಿ ಅಸಲಾ'

ಮೊಹರಂ ಹಬ್ಬದಲ್ಲಿ ಓಣಿ ಹುಡುಗರು ಹುರುಪಿನಿಂದ ಹೆಜ್ಜೆ ಹಾಕುತ್ತಾ ಈ ಮೇಲಿನ 'ಹೆಜ್ಜೆ ಮ್ಯಾಳದ' ಹಾಡು ಹಾಡುತ್ತಿದ್ದರೆ ಅಲ್ಲೊಂದು ಜಾನಪದ ಲೋಕ ತೆರೆದುಕೊಳ್ಳುತ್ತಿತ್ತು. ಭಾವಕ್ಕೆ ಭಾವ ಬೆರೆತು ಸ್ವಚ್ಛ ಮನಸ್ಸು ಸಾಮರಸ್ಯದ ಹೆಜ್ಜೆಗೆ ಗೆಜ್ಜೆ ಕಟ್ಟುತ್ತಿತ್ತು. ಇದೇ ಈ ಜಾನಪದದ ತಾಕತ್ತು.

ಕನ್ನಡ ಜನಪದ ಸಾಹಿತ್ಯದಲ್ಲಿ ಮೊಹರಂ ಪದಗಳಿಗೆ ಒಂದು ವಿಶಿಷ್ಟವಾದ ಸ್ಥಾನವಿದೆ. ಮೊಹರಂ ಹಬ್ಬದ ಸಂದರ್ಭದಲ್ಲಿ ಹೇಳಲಾಗುವ ಈ ಹಾಡುಗಳನ್ನು ರಿವಾಯತ ಪದಗಳು, ಹೆಜ್ಜೆ ಮ್ಯಾಳದ ಹಾಡುಗಳು, ಕರ್ಬಲಾ ಹಾಡುಗಳು, ಜಂಗೀನ ಪದಗಳು, ಮೊಹರಂ ಹಾಡುಗಳು ಮೊದಲಾದ ಹೆಸರುಗಳಿಂದ ಕರೆಯಲಾಗುತ್ತದೆ. ಉತ್ತರ ಕರ್ನಾಟಕದ ಪ್ರದೇಶಗಳಲ್ಲಿ ಈ ಹಬ್ಬವನ್ನು ಹಿಂದೂ-ಮುಸ್ಲಿಂ ಬಾಂಧವರು ಕೂಡಿ ಆಚರಿಸುತ್ತಾರೆ. ಹಳ್ಳಿಗಳಲ್ಲಿ 'ಅಲಾಯ' ಹಬ್ಬವೆಂದು ಕರೆಯಲಾಗುವ ಮೊಹರಂ ಹಬ್ಬವನ್ನು ಸಂಭ್ರಮದಿಂದ ಆಚರಿಸುತ್ತಾರೆ.

ಜಾನಪದ ಒಡಲಲ್ಲಿ ಆಯ್ದಷ್ಟೂ ಮುತ್ತುಗಳು. ಹಾಡು, ಹಸೆ, ಕುಣಿತ ಎಲ್ಲದರ ಉಸಿರು ಚೆನ್ನಾಗಿ ಬದುಕುವುದು. ಆಯಾಸದ ದುಡಿತದ



ನಂತರ ಹೊಮ್ಮಿದ ಈ ಹಾಡು ಕುಣಿತಗಳು ಬಯಸಿದ್ದು ಒಂದಾಗಿ ಬಾಳಿ ನಗು ಹರಡುವುದನ್ನು. ಜಾನಪದದ ಒಡಲಲ್ಲಿ 'ರಸವೇ ಜನನ, ವಿರಸವೇ ಮರಣ, ಸಮರಸವೇ ಜೀವನ' ಎನ್ನುವ ಹಾಡು ಕುಣಿತಗಳಿಗೆ ಲೆಕ್ಕವಿಲ್ಲ.

ಹಿಂದೂ-ಮುಸ್ಲಿಂ ಎರಡೂ ಸಂಸ್ಕೃತಿಯನ್ನು ಒಡಲಲ್ಲಿಟ್ಟುಕೊಂಡು ಬದುಕು ಸಾಗಿಸಿದ ಶಿಶುನಾಳ ಷರೀಫಜ್ಜನಂತೆ ಹಿಂದೂ-ಮುಸ್ಲಿಮರು ಜೊತೆ ಜೊತೆಯಾಗಿ ಹಾಡಿ ಕುಣಿದ ಉದಾಹರಣೆಗಳು ಇಂದಿಗೂ ಸಾಮರಸ್ಯದ ಪಲ್ಲವಿಯನ್ನು ಗುನುಗುನಿಸುತ್ತವೆ. ಅಂತಹ ಕುಣಿತಗಳ ಪೈಕಿ 'ಅಲಾಯಿ ಹೆಜ್ಜೆ' ಪ್ರಮುಖವಾದದ್ದು.


ಮೊಹರಂ ಬಂದರೆ ಸಾಕು ಜಾತಿ-ಮತ ಮರೆತು ಹಾಡಿಗೆ ಹೆಜ್ಜೆ ಹಾಕಲು ಜೀವಗಳು ತವಕಿಸುತ್ತವೆ. ಮೇಲೆ ಹಾದ ಬಿದಿರು ಕಂಬಗಳಿಗೆ ಬಣ್ಣ ಬಣ್ಣದ ಸಿಂಗಾರ ಬಣ್ಣದ ಮಾಲೆಗಳು ಕಣ್ಣುಗಳಿಗೆ ಹಬ್ಬ. ಡಬ್ಬುಗಳ್ಳಿ ಮುಳ್ಳಿನ ಮೇಲೆ ಕುಣಿಯುತ್ತ, ಹಾಡುತ್ತಾ ಬದುಕ ಜಾಗೃತಿಯ ಸಂದೇಶವನ್ನು ಸಾರುವದನ್ನು ವರ್ಣನಾತೀತ. ಹಾಡುಗಾರರು ಹೇಳಿಕೊಟ್ಟ ಹಾಡನ್ನು ಹಾಡುತ್ತಾ ಲೆಕ್ಕಾಚಾರದ ಹೆಜ್ಜೆ ಹಾಕುತ್ತಾರೆ. ಹಿಂದು ಮುಂದು ಎಣಿಸಿ ತೂಕ ತಪ್ಪದಂತೆ ಇಕ್ಕುವ ಹೆಜ್ಜೆಗಳೇ ಈ ಕುಣಿತದ ಗಣಿತ. ಒಂದು ರೀತಿಯಲ್ಲಿ ಇವೂ ಹೆಜ್ಜೆ ಮೀರದ ಸಾಮರಸ್ಯದ ಬದುಕಿನ ಸಂಕೇತ. ಇವರು ಇಡುವ ಹೆಜ್ಜೆಗಳ ಚಮತ್ಕಾರದಿಂದಾಗಿ ಹಗ್ಗಗಳು ನಿಲ್ಲುತ್ತದೆ. ಹಲವು ಮತಗಳು, ಹಲವು ಮನಸ್ಸುಗಳು ಸೇರಿ ಒಂದು ಬದುಕನ್ನು ರೂಪಿಸುತ್ತದೆ.

ಹಾಡುಗಾರರು ಬಹುತೇಕ ಸಾಮರಸ್ಯದ ಜೀವನದ ತಿರುಳು ಹೊಂದಿರುವ ಹಾಡುಗಳಿಗೇ ಒತ್ತು ಕೊಡುತ್ತಾರೆ. ಶರಣರ ವಚನಗಳಿಂದ ಹಿಡಿದು ಕರ್ಬಲದ ಪದಗಳವರೆಗೆ ಅಲಾಯಿ ಹೆಜ್ಜೆ ಕುಣಿತದಲ್ಲಿ ಸ್ಥಾನವಿದೆ. ಪೈಗಂಬರರ ಬೋಧನೆಗಳೂ ಹಾಡಾಗಿ ಹೊರಹೊಮ್ಮುತ್ತವೆ. ಹಾಗೆಯೇ ವಚನಗಳು ಕಿವಿಗೆ ಇಂಪು ನೀಡುತ್ತವೆ. ಬಹುತೇಕ ಹಳ್ಳಿಗಳಲ್ಲಿ ಪ್ರಚಾರವಿರುವ ಈ ಕಲೆ ಈಗ ಹಳ್ಳಿಗಳ ಸರಹದ್ದನ್ನು ದಾಟಿ ನಗರಗಳಲ್ಲೂ ಸಮರಸದ ಸಂದೇಶ ಹರಡುತ್ತಿವೆ. ರಾಜ್ಯದ ಗಡಿ ದಾಟಿ ರಾಷ್ಟ್ರಮಟ್ಟದ ಉತ್ಸವಗಳಲ್ಲೂ ಕಾಣಿಸಿಕೊಂಡಿದೆ.

ಮೊಹರಂ ತಿಂಗಳ ಹತ್ತನೆಯ ದಿನ ಹಬ್ಬದ ಕೊನೆಯ ದಿನವಾಗಿದ್ದು, ಪೀರಾಗಳು ಹೊಳೆಗೆ ಹೋಗುವವು. ಇಮಾಮ ಹುಸೇನರು ಶಹೀದರಾದುದು ಇಂದು. ಈ ದಿನಕ್ಕೆ ಶಾದತ್ ಎಂದೂ ದಫನ್ ಎಂದೂ ಕರೆಯುವುದುಂಟು. ಅಂದು ಮುಂಜಾನೆ ದೇವರೇಳುವ ವೇಳೆಗಾಗಲೇ ಊರಿನ ಹಿಂದು-ಮುಸ್ಲಿಂ ಮುಖಂಡರು ನೆರೆಯುವರು. ಅವರ ಸಮ್ಮುಖದಲ್ಲಿ ಮುಲ್ಲಾ ಸಾಹೇಬರು ಫಾತಿಹಾ ಮಾಡುವರು. ನಂತರ ಅಗ್ಗಿ ತುಳಿದು ಅಲಾವಿಗೆ ಐದು ಬಾರಿ ಸುತ್ತು ಹಾಕಿ ಊರಿನಲ್ಲಿ ಬರುವರು. ಬರುವಾಗ ಒಮ್ಮೊಮ್ಮೆ ಡೋಲಿ ಹೊತ್ತವರಿಗೆ ಕೈದೇವರು ಹಿಡಿದವರಿಗೆ ಮೈ ತುಂಬುವುದು. ಮೈ ತುಂಬಿದವರು ಹರಕೆ ಮನೆಗಳಿಗೆ ನುಗ್ಗಲು, ಮನೆಯೊಡೆಯರು ಕಾಲಿಗೆ ನೀರು ಸುರುವಿ, ನಮಸ್ಕರಿಸಿ ಊದುಬತ್ತಿ ಕೊಟ್ಟು ರಕ್ಷಣೆ ಆಶೀರ್ವಾದ ಪಡೆದುಕೊಂಡರೆ ಸಾರ್ವಜನಿಕರು, ಭವಿಷ್ಯ, ಮಳೆ ಬೆಳೆ ಕೇಳುವರು, ಫಾತಿಹಾದ ನಂತರ ಮೈದುಂಬಿದ ದೇವರು, ಡೋಲಿ ನಿರ್ಗಮಿಸುವುದು.

ಮೊಹರಂ ತಿಂಗಳಲ್ಲಿ ಚಂದ್ರ ದರ್ಶನವಾದ ದಿನವೇ ಮಸೀದೆ ಮುಂದೆ ಗ್ರಾಮದ ಮುಲ್ಲಾನ ಹಿರಿತನದಲ್ಲಿ ಊರ ಹಿರಿಯರು ಕೂಡಿಕೊಂಡು ಗುದ್ದಲಿ ಪೂಜಾ ಸಮಾರಂಭ ನೆರವೇರಿಸುತ್ತಾರೆ. ಬೆಂಕಿ ಹಾಕುವ ಹೊಂಡ ಮಾಡುವ ಸಲುವಾಗಿ ತಗ್ಗು ತೆ-ಊಡುತ್ತಾರೆ.ಇದನ್ನೇ 'ಗುದ್ಲಿ ಬಿತ್ತು' ಎನ್ನುತ್ತಾರೆ. ಈ ಗುದ್ದಲಿ ಬಿದ್ದ ಆಚರಣೆಯ ಐದನೆಯ ದಿನಕ್ಕೆ ದೇವರು ಕೂಡ್ರಿಸುವ ಕಾರ್ಯಕ್ರಮ ಜರುಗುತ್ತದೆ. ಕೂಡ್ರಿಸಿದ ಈ ದೇವರುಗಳಾದ ಗಜ್ಜಪೀರಾ, ಲಾಲಸಾಹೇಬ, ಹಸನ ಹುಸೇನಿಗಳಿಗೆ ಹಿಂದೂ ಮುಸ್ಲಿಮರು ಕೂಡಿಯೇ ಭಯ ಭಕ್ತಿಯಿಂದ ನಡೆದುಕೊಳ್ಳುತ್ತಾರೆ.

ಮೊಹರಂ ಹಬ್ಬದಲ್ಲಿ ಜಾತಿ ಭೇದವಿಲ್ಲದೆ 'ಆಲಾವಿ' ಸಂಭ್ರಮದಿಂದ ಕುಣಿಯುವ ಸಂಗತಿಯೇ ಮೂಲತಹ ವೈರುಧ್ಯದಿಂದ ಕೂಡಿದೆ. ದುಃಖಮೂಲ ಆಚರಣೆಯಾಗದೆ ಸಂಭ್ರಮ ಮೂಲವಾಗಿರುವುದು ತತ್ವ ಪದಕಾರರಿಗೆ ಅಭಾಸವಾಗಿ ಕಂಡಿರಬೇಕು. ಕುಣಿಯುವುದು ಮತ್ತು ದೇವರನ್ನು 'ದಫನ್' ಮಾಡುವುದನ್ನು ಗಮನಿಸಿದ ಅನುಭಾವಿಗಳು ಅದನ್ನು ಸಹಜವಾಗಿಯೇ ತಮ್ಮ ನೆಲೆಯಲ್ಲಿ ಅರ್ಥೈಸಿಕೊಂಡಿದ್ದಾರೆ. ವ್ಯಕ್ತಿ ತನ್ನನ್ನು ತಾನೇ ಸವಾಲು ಮಾಡಿಕೊಂಡು, ಒಳಗಿನ ಕೆಟ್ಟ ಗುಣಗಳನ್ನು 'ದಫನ್' ಮಾಡಿಕೊಳ್ಳಬೇಕು ಎಂಬ ಅರ್ಥದಲ್ಲಿ ವಿವೇಚಿಸಲಾಗಿರುವುದು ರಿವಾಯತ ಪದಗಳನ್ನು ಕಾಣುವ ಹೊಸ ದೃಷ್ಟಿಯಾಗಿದೆ.



– ಈಶ್ವರ ಎಸ್.ಮೆಡ್ಲೇರಿ.
ಅಧ್ಯಕ್ಷರು, ಕಸಾಪ-ಲಕ್ಷ್ಮೇಶ್ವರ.

### ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಮಾಲಿಕೆ-5

# ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ನಿರಂತರ ಹರಿಯುವಂತಹ ಪ್ರವಾಹವಾಗಿದೆ. ವಿದ್ಯಾರ್ಥಿಗಳು ನೂತನ ಆವಿಷ್ಕಾರಗಳನ್ನು ತಮ್ಮ ಶೈಕ್ಷಣಿಕ ಅಧ್ಯಯನದಲ್ಲಿ ಅಳವಡಿಸಿಕೊಳ್ಳುವ ಮೂಲಕ ವೈಜ್ಞಾನಿಕ ಮನೋಭಾವನೆ, ಚಿಂತನೆಗಳನ್ನು ಬೆಳೆಸಿಕೊಳ್ಳಬೇಕೆಂದು ಗದುಗಿನ ಯುವ ಧುರೀಣ, ಶಿಕ್ಷಣ ಪ್ರೇಮಿ ಆಂಜನೇಯ ಕಟಗಿ ಹೇಳಿದರು.

ಅವರು ಶುಕ್ರವಾರ ಗದಗ ತಾಲೂಕಿನ ಸೊರಟೂರ ಗ್ರಾಮದ ಕರ್ನಾಟಕ ಪಬ್ಲಿಕ್ ಸ್ಕೂಲ್‌ನಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಎಸ್‌ಎಸ್‌ಎಲ್‌ಸಿಯಲ್ಲಿ ಮೊದಲ 5 ಸ್ಥಾನ ಪಡೆದುಕೊಂಡ ಗದಗ ತಾಲೂಕಿನ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದರು ಸರ್ಕಾರಿ ಶಾಲಾ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿ ವಿದ್ಯಾರ್ಥಿಗಳಿಗೆ ನೆರವಾಗುತ್ತಿದೆ.



ಶಿರುಂಜ ಗ್ರಾಮದ ಸರ್ಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆಯಲ್ಲಿ ಶಫಿ ನದಾಫ್, ಭೀಮಪ್ಪ ಹಿತ್ತಲಮನಿ, ಸುಮಾ ಕಂಬಳಿ, ಈಶ್ವರಯ್ಯ ಹಿರೇಮಠ, ಸೃಷ್ಠಿ ಗೌಳೇರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಅಧ್ಯಕ್ಷತೆಯನ್ನು ಪಾರ್ವತಿ ವಸ್ತ್ರದ ವಹಿಸಿದ್ದರು. ರವಿರಾಜ ಪವಾರ ಸ್ವಾಗತಿಸಿದರು, ದಿಲೀಪ ಜಮಾದಾರ ನಿರೂಪಿಸಿದರು. ಎಂ.ಎ. ಹಿರೇಮಠ ವಂದಿಸಿದರು.

ಅದರೊಟ್ಟಿಗೆ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವೂ ಸಹ ಪ್ರತಿಭಾನ್ವಿತರಿಗೆ ಪ್ರೋತ್ಸಾಹಿಸುವ ಕಾರ್ಯ ಮಾಡುತ್ತಿರುವದು ಅಭಿನಂದನೀಯ ಎಂದರು.

ಮುಖ್ಯ ಅತಿಥಿ ಡಾ. ಶರಣಬಸವ ಚೌಕಿಮಠ ಮಾತನಾಡಿ, ಗ್ರಾಮೀಣ ಪ್ರದೇಶದ ಅದರಲ್ಲೂ ವಿಶೇಷವಾಗಿ ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿ ಉತ್ತಮ ಫಲಿತಾಂಶ ಪಡೆದುಕೊಂಡ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಮೂಲಕ ನಗದು ಪುರಸ್ಕಾರದ ಚೆಕ್, ಪ್ರಮಾಣ ಪತ್ರ, ಕಾಲೇಜ್ ಬ್ಯಾಗ್ ನೀಡಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗೌರವಿಸುತ್ತಿರುವ ಪ್ರತಿಷ್ಠಾನದ ಕಾರ್ಯ ಶ್ಲಾಘನೀಯ ಕಾರ್ಯ ಎಂದು ಬಣ್ಣಿಸಿದರು.

ಪ್ರತಿಭಾನ್ವಿತರಾದ ರಕ್ಷಿತಾ ಪರವಾನಗಿ, ರುಕೀಜಾ ಮುಲ್ಲಾ, ನಂದಿತಾ ಕನ್ಯಾಳ, ಪಲ್ಲವಿ ಕರಿಗಾರ, ಚೈತ್ರಾ ತೋಪಿನ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಅಧ್ಯಕ್ಷತೆಯನ್ನು ಎಂ.ಎಸ್. ಮಕಾನದಾರ ವಹಿಸಿದ್ದರು. ವೇದಿಕೆಯ ಮೇಲೆ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ, ಕಾರ್ಯದರ್ಶಿ ಸುಭಾಸಚಂದ್ರ ಬೆಟ್ಟದೂರ, ಶಿವಾನಂದ ಕತ್ತಿ, ಗಂಗಾಧರ ಮೇಲಗಿರಿ, ಮಹಾದೇವಪ್ಪ ಮಾದಣ್ಣವರ, ವಿನೋದ ಭಾಂಡಗೆ, ಭಾರತಿ ಪಾಟೀಲ, ನೇಹಾ, ಸುಧಾರಾಣಿ ಉಪಸ್ಥಿತರಿದ್ದರು. ಪಿ.ಜಿ. ನಾಯಕ ಸ್ವಾಗತಿಸಿದರು, ಬಸಪ್ಪ ನೆರ್ತಿ ನಿರೂಪಿಸಿದರು. ಎನ್. ಎಚ್. ದೊಡ್ಡಗೌಡ್ರ ವಂದಿಸಿದರು.

ಯಲಿಶಿರೂರ ಗದಗ ತಾಲೂಕಿನ ಯಲಿಶಿರೂರ ಗ್ರಾಮದ ದಂಡವ್ವ ನಾಗಪ್ಪ ಯಲಿ ಸರ್ಕಾರಿ ಪ್ರೌಢಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ರಂಜಿತಾ ಪಾಟೀಲ, ಗಾಯತ್ರಿ ಹುಲಕೋಟಿ, ಮೇಘಾ ವಗ್ಗರ, ಯಲ್ಲಪ್ಪ ಹುಲಕೋಟಿ, ನಾಗಲಕ್ಷ್ಮೀ ಜಂಗಮಠ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಅಧ್ಯಕ್ಷತೆಯನ್ನು ಆರ್.ಎಸ್. ಜಲರಡ್ಡಿ ವಹಿಸಿದ್ದರು. ವೇದಿಕೆಯ ಮೇಲೆ ಡಾ. ಶರಣಬಸವ ಚೌಕಿಮಠ, ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ, ಕಾರ್ಯದರ್ಶಿ ಸುಭಾಸಚಂದ್ರ ಬೆಟ್ಟದೂರ, ಕೃಷ್ಣಾ ಈರಡ್ಡಿ, ಸೋಮಶೇಖರ ಯರಡ್ಡಿ, ಶಿವಾನಂದ ಕತ್ತಿ, ಜಿ.ಎಂ. ಫಿರಂಗಿ, ಭಾರತಿ ಪಾಟೀಲ, ನೇಹಾ, ಸುಧಾರಾಣಿ, ಶಹಬಾಜ್, ಗ್ರಾಮದ ಹಿರಿಯರಾದ ಹೊನ್ನಪ್ಪನವರ ಉಪಸ್ಥಿತರಿದ್ದರು. ಸೃಷ್ಟಿ ಶಿರಹಟ್ಟಿ ಪ್ರಾರ್ಥಿಸಿದರು, ಜಗದೀಶ ದಿನ್ನಿ ಸ್ವಾಗತಿಸಿದರು, ಜೆ.ಚಂದ್ರಶೇಖರ ನಿರೂಪಿಸಿದರು. ಎಸ್.ಕೆ. ಹಿರೇಮಠ ವಂದಿಸಿದರು.

# ಗುಣಮಟ್ಟದ ಕಾಮಗಾರಿಗೆ ಆದ್ಯತೆಯಿರಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಗುಣಮಟ್ಟದ ಕಡೆಗೆ ಗಮನ ಹರಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೂಚಿಸಿದರು.

ಅವರು ಶನಿವಾರ ಗದಗ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಆಯೋಜಿಸಿದ್ದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಮೊರಾರ್ಜಿ ವಸತಿ ಶಾಲೆ ಗ್ರಂಥಾಲಯ ಹಾಗೂ ಗಂಡು ಮಕ್ಕಳ ವಸತಿ ಶಾಲೆ ಕಟ್ಟಡ ನಿರ್ಮಾಣಕ್ಕೆ ಮಲ್ಲಸಮುದ್ರದಲ್ಲಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಗ್ರಂಥಾಲಯ ಹಾಗೂ ಶಾಲಾ ಕಟ್ಟಡ ನಿರ್ಮಾಣಕ್ಕೆ 733 ಲಕ್ಷ ರೂ ಅನುದಾನ ಒದಗಿಸಲಾಗಿದೆ. ನೀಡುವ ಅನುದಾನವನ್ನು ಸದ್ಬಳಕೆ ಮಾಡಿಕೊಂಡು ನಿಗದಿತ ಅವಧಿಯೊಳಗೆ ಗುಣಮಟ್ಟದ ಕಾಮಗಾರಿ ನಿರ್ವಹಿಸುವಂತೆ ನೆರೆದ ಅಧಿಕಾರಿ ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಪ್ರಭು ಬುರಬುರೆ, ಸಿದ್ದು ಪಾಟೀಲ, ಎಸ್. ಎನ್. ಬಳ್ಳಾರಿ, ರವಿ ಮೂಲಿಮನಿ, ಫಾರೂಕ್ ಹುಬ್ಬಳ್ಳಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಂಘದ ಅಧ್ಯಕ್ಷ ರವಿ ಗುಂಜೀಕರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಚಿತ ಮೋತಿಬಿಂದು ಶಸ್ತ್ರಚಿಕಿತ್ಸೆ




■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ ಹಾಗೂ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಹುಬ್ಬಳ್ಳಿ ಇವರ ಸಹಯೋಗದಲ್ಲಿ, ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಹಕಾರ ಹಾಗೂ ಎಚ್.ಕೆ. ಪಾಟೀಲ ಸೇವಾ ತಂಡದ ಸಹಾಯದಿಂದ ಒಟ್ಟು 21 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ ಶಸ್ತ್ರ (ಮೋತಿ ಬಿಂದು) ಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ನಡೆಸಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ಮಾಡಿದರು.

ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಎಂ.ಎಂ. ಜೋಶಿ ಆಸ್ಪತ್ರೆಯ ಖ್ಯಾತ ವೈದ್ಯರು ನಡೆಸಿದರು. ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿ ಪಾಲ್ಗೊಂಡು ಸಹಾಯ ಸಹಕಾರ ನೀಡಿದರು.

### ಬಸವದಳದ 1652ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ಎಸ್.ಎಚ್. ಹಿರೇಸಕ್ಕರಗೌಡ್ರ

# ಹಳಕಟ್ಟಿ, ಲಿಂಗಾನಂದರು ಎರಡು ನಕ್ಷತ್ರಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಕಲ್ಯಾಣಕ್ರಾಂತಿಯಲ್ಲಿ ಶರಣರ ಕಗ್ಗೊಲೆ, ವಚನ ಸಾಹಿತ್ಯ ದಹಿಸುವಿಕೆ, ಎಳೆಹೂಟೆಯಂಥಹ ನಿರ್ದಯ ಕ್ರಮಗಳಿಂದ ಕಂಗೆಟ್ಟ ಶರಣರು ಚೆನ್ನಬಸವಣ್ಣನವರ ನೇತೃತ್ವದಲ್ಲಿ ಲಿಂಗಾಯತ ಧರ್ಮಗ್ರಂಥ ರಕ್ಷಣೆಗಾಗಿ ವಚನ ಕಟ್ಟುಗಳನ್ನು ಹೊತ್ತುಕೊಂಡು ಉಳವಿಯತ್ತ ನಡೆದರು. ಕಲ್ಯಾಣದ ಘಟನೆ ಲಿಂಗಾಯತ ಧರ್ಮಕ್ಕೆ ದೊಡ್ಡ ಹಿನ್ನಡೆ ನೀಡಿತು. ಮುಂದೆ 15ನೇ ಶತಮಾನದಲ್ಲಿ ಎಡೆಯೂರು ಸಿದ್ಧಲಿಂಗೇಶ್ವರ ಹಾಗೂ ಅವರ ಶಿಷ್ಯಂದಿರು ವಚನ ಸಾಹಿತ್ಯದ ಪುನಶ್ಚೇತನ ನಡೆಯಿತು. ಮುಂದಿನ 4 ಶತಮಾನಗಳ ನಂತರ ಫ.ಗು. ಹಳಕಟ್ಟಿ ಎಂಬ ಮಹಿಮರ ಮೂಲಕ ವಚನ ತಾಡೋಲೆಗಳ ರಕ್ಷಣೆ, ಅವುಗಳ ಪ್ರಕಟನೆ ನಡೆದು ವಚನ ಸಾಹಿತ್ಯ ರಕ್ಷಣೆಯಾಗುವಂತಾಯಿತೆಂದು ಶಿಕ್ಷಕರಾದ ಎಸ್.ಎಚ್. ಹಿರೇಸಕ್ಕರಗೌಡ್ರ ನುಡಿದರು.




ಅವರು ಬಸವದಳದ 1652ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ವಚನ ಸಂಶೋಧನೆಯ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ 61ನೇ ಸ್ಮರಣೆ ಹಾಗೂ ಪೂ. ಲಿಂಗಾನಂದ ಸ್ವಾಮಿಗಳ 30ನೇ ಸ್ಮರಣೆ ಕಾರ್ಯಕ್ರಮದಲ್ಲಿ ಫ.ಗು. ಹಳಕಟ್ಟಿಯವರ ಜೀವನ ಚರಿತ್ರೆ ಕುರಿತು ಮಾತನಾಡಿದರು.

ಫಕೀರಪ್ಪನವರ ತಂದೆ ಗುರುಬಸಪ್ಪನವರು ಶಿಕ್ಷಕರಾಗಿದ್ದರು. ಜೊತೆಗೆ ಶರಣತತ್ವ ಚಿಂತಕರಾದ ಮಾವ ತಮ್ಮಣ್ಣಪ್ಪ ಚಿಕ್ಕೋಡಿಯವರ ಒಡನಾಟದ ಪರಿಣಾಮ ಶರಣ ಸಾಹಿತ್ಯದತ್ತ ಆಸಕ್ತಿ ಬೆಳೆಯಿತು. ವಿದ್ಯಾರ್ಥಿ ದೆಸೆಯಿಂದಲೂ ಪ್ರತಿಭಾವಂತರಾಗಿದ್ದ ಅವರು ಕಾನೂನು ಪದವಿ ಪಡೆದು ವಕೀಲ ವೃತ್ತಿ ಮಾಡಲಾರಂಭಿಸಿದರು. ಅದೇ ಸಂದರ್ಭದಲ್ಲಿ ಭಾಗೀರಥಿ ಜೊತೆ ವಿವಾಹವಾಯಿತು. ಶಿವಲಿಂಗಪ್ಪ ಮಂಚಾಲೆ ಇವರ ಮನೆಯಲ್ಲಿದ್ದ 'ಪ್ರಭುದೇವರ ವಚನಗಳ' ತಾಳೆಗರಿಯ ವಚನ ಕಟ್ಟುಗಳನ್ನು ಕಂಡು ಪ್ರಭಾವಿತರಾದರು. ಒಟ್ಟಾರೆಯಾಗಿ ಫ. ಗು. ಹಳಕಟ್ಟಿ ಹಾಗೂ ಲಿಂಗಾನಂದ ಮಹಾಸ್ವಾಮಿಗಳು ಲಿಂಗಾಯತ ಧರ್ಮದ ಎರಡು ನಕ್ಷತ್ರಗಳಾಗಿವೆ ಎಂದು ನುಡಿದರು.

ನಿವೃತ್ತ ಶಿಕ್ಷಕಿ ಗಂಗಮ್ಮಾ ಹೂಗಾರ ಪೂಜ್ಯ ಲಿಂಗಾನಂದ ಸ್ವಾಮೀಜಿಯವರ ಬಗ್ಗೆ ಮಾತನಾಡುತ್ತಾ, ಹಳಕಟ್ಟಿಯವರು ವಚನ ತಾಡೋಲೆಗಳನ್ನು ಸಂಗ್ರಹಿಸಿ ಗ್ರಂಥಗಳ ಮೂಲಕ ಪ್ರಕಟಿಸಿದರು. ಆ ವಚನ ಸಾಹಿತ್ಯವನ್ನು ನಾಡಿನಾದ್ಯಂತ ತಮ್ಮ ಪ್ರವಚನಗಳ ಮೂಲಕ ಪ್ರಸಾರ ಮಾಡಿದ ಕೀರ್ತಿ ಪೂ. ಲಿಂಗಾನಂದ ಮಹಾಸ್ವಾಮಿಗಳಿಗೆ ಸಲ್ಲುತ್ತದೆ. ಅಲ್ಲದೇ ಶರಣ ಧರ್ಮ ಅರಿವಂತಾಗಲು ನಾಡಿನಾದ್ಯಂತ ರಾಷ್ಟ್ರೀಯ ಬಸವದಳಗಳನ್ನು ಸ್ಥಾಪಿಸಿ ಅಲ್ಲಿ ಶರಣರ ವಿಚಾರ ಚರ್ಚೆ, ಚಿಂತನೆ ನಡೆಸಲು ಅನುವು ಮಾಡಿಕೊಟ್ಟರು. ಇದು ದೊಡ್ಡ ಪರಿಣಾಮ ಬೀರಿ ಜನರಿಗೆ ನಿಜವಾದ ಲಿಂಗಾಯತ ಧರ್ಮದ ಸ್ವರೂಪದ ಪರಿಚಯವಾಯಿತು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ನಿಶಿಕ್ಷಕಿ ವನಜಾಕ್ಷಿ ಕಪ್ಪರದ ಮಾತನಾಡಿ, ತಾವು ಕೂಡಾ ಲಿಂಗಾನಂದ ಸ್ವಾಮಿಗಳ ಪ್ರವಚನದ ಪ್ರಭಾವಕ್ಕೆ ಒಳಗಾಗಿದ್ದೇನೆ. ಅವರು ಹೇಳುತ್ತಿದ್ದ ಧರ್ಮಗುರು ಬಸವಣ್ಣ, ಧರ್ಮಗ್ರಂಥ ವಚನ ಸಾಹಿತ್ಯ, ಧರ್ಮದೇವರು ಇಷ್ಟಲಿಂಗವೆಂಬುದನ್ನು ಪೂಜ್ಯರಿಂದ ಅರಿತಿದ್ದಾಗಿ ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಬಸವದಳ ಅಧ್ಯಕ್ಷ ವಿ.ಕೆ. ಕರೇಗೌಡ್ರ ಮಾತನಾಡಿ, ನಮ್ಮ ಬಸವದಳ ಕಳೆದ ಮೂರು ದಶಕಗಳಿಂದಲೂ ಶರಣ ಸಾಹಿತ್ಯ ಪ್ರಸರಣ ಮಾಡುತ್ತಿದೆ. ಮನೆ, ಮನೆಗಳಿಗೂ ವಚನ ಸಾಹಿತ್ಯ ಮುಟ್ಟಿಸಲು ಕಟಿಬದ್ಧರಾಗಿದ್ದೇವೆಂದರು.

ಆರಂಭದಲ್ಲಿ ವಚನ ಪ್ರಾರ್ಥನೆಯು ರೇಣಕ್ಕ ಕರೀಗೌಡ್ರ ನಡೆಸಿದರು. ಸಹನಾ ಆಲತಗಿಯವರು ಸ್ವಾಗತಿಸಿದರು. ಕಳ್ಳಿಮನಿ ರಾಮಣ್ಣ ನಿರೂಪಿಸಿದರು. ಪ್ರಕಾಶ ಅಸುಂಡಿ ಶರಣು ಸಮರ್ಪಣೆಗೈದರು.

# ಕರವೇ ಮಹಿಳಾ ಅಧ್ಯಕ್ಷರ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾಧ್ಯಕ್ಷರಾದ ಹನಮಂತಪ್ಪ ಎಚ್. ಅಬ್ಬಿಗೇರಿಯವರು ಲಲಿತಾ ಉ.ಜಾಧವ ಇವರ ನಾಡು, ನುಡಿ, ನೆಲ, ಜಲ, ಹೋರಾಟವನ್ನು ಮೆಚ್ಚಿ ಇವರನ್ನು ಕರ್ನಾಟಕ ರಕ್ಷಣಾ ವೇದಿಕೆಯ ಗದಗ ತಾಲೂಕಿನ ಕದಡಿ ಗ್ರಾಮ ಘಟಕದ ಮಹಿಳಾ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಆದೇಶಿಸಿದ್ದಾರೆ.

# ಇಂದು ಉದ್ಯಾನವನದಲ್ಲಿ ಉದಯರಾಗ ಸಂಧ್ಯಾರಾಗ

**■ವಿಜಯಸಾಕ್ಷಿ ಸುದ್ದಿ, ಗದಗ**

ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ದಿನಾಂಕ: 06.07.2025 ರಂದು ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ಸಿದ್ಧಲಿಂಗಯ್ಯ ಶಾಸ್ತ್ರಿಗಳು ಸ್ಥಾವರಮಠ (ಸೋಮನಕಟ್ಟಿ) ಮತ್ತು ತಂಡ, ಗದಗ ಇವರಿಂದ ಪ್ರವಚನ ಹಾಗೂ ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ವೆಂಕಟೇಶ ಕುಲಕರ್ಣಿ ಮತ್ತು ತಂಡ, ಗದಗ ಇವರಿಂದ ಸುಗಮ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಮಹಿಳಾ ವರ್ಕ್‌ಶೆಡ್ ಕಟ್ಟಡವನ್ನು ಉದ್ಘಾಟಿಸಿದ ಶಾಸಕ ಸಿ.ಸಿ. ಪಾಟೀಲ ಅಭಿಮತ

# ಮಹಿಳೆ ಕುಟುಂಬದ ಆರ್ಥಿಕ ಪ್ರಗತಿಗೆ ಶ್ರಮಿಸುತ್ತಿದ್ದಾಳೆ

**■ವಿಜಯಸಾಕ್ಷಿ ಸುದ್ದಿ, ನರಗುಂದ**

ಗ್ರಾಮೀಣ ಮಹಿಳೆಯರು ಸ್ವ-ಸಹಾಯ ಗುಂಪುಗಳ ಮೂಲಕ ಸಂಘಟಿತರಾಗಿ, ವಿವಿಧ ಜೀವನೋಪಾಯ ಚಟುವಟಿಕೆಗಳನ್ನು ಮಾಡುತ್ತಿರುವುದು ಮತ್ತು ತಮ್ಮ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ ಹೊಂದಲು ಬ್ರಾಂಡಿಂಗ್ ಮತ್ತು ಪ್ಯಾಕಿಂಗ್ ವ್ಯವಸ್ಥೆ ಕೈಗೊಂಡಿರುವುದು ಶ್ಲಾಘನೀಯ ಎಂದು ಮಾಜಿ ಸಚಿವ, ನರಗುಂದ ವಿಧಾನ ಸಭಾ ಕ್ಷೇತ್ರದ ಶಾಸಕ ಸಿ.ಸಿ. ಪಾಟೀಲ ತಿಳಿಸಿದರು.

ನರುಗಂದ ತಾಲೂಕಿನ ಚಿಕ್ಕ ನರಗುಂದ ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ನಿರ್ಮಿಸಲಾದ ಮಹಿಳಾ ವರ್ಕ್‌ಶೆಡ್ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡುನಾಡುತ್ತಿದ್ದರು.

ಮಹಿಳೆ ಇಂದು ಎಲ್ಲಾ ರಂಗಗಳಲ್ಲಿಯೂ ಅಭಿವೃದ್ಧಿ ಹೊಂದಿದ್ದು, ಸಮಾಜಕ್ಕೆ ತನ್ನದೇ ಆದ ಕೊಡುಗೆ ನಿಡುತ್ತಿದ್ದಾಳೆ. ಮಹಿಳೆ ವಿವಿಧ ಉತ್ಪನ್ನದಾಯಕ ಚಟುವಟಿಕೆಗಳಲ್ಲಿ ತನ್ನನ್ನು ತೊಡಗಿಸಿಕೊಂಡು ಕುಟುಂಬದ ಆರ್ಥಿಕ ಪ್ರಗತಿಗೆ ಶ್ರಮಿಸುತ್ತಿದ್ದಾಳೆ ಎಂದರು.



ಇದೇ ಸಂದರ್ಭದಲ್ಲಿ 'ಗದಗಿನ ಹಳ್ಳಿ ರುಚಿ' ಎಂಬ ಬ್ರಾಂಡ್ ಅಡಿಯಲ್ಲಿ ಸುರಕೋಡ ಗ್ರಾಮದ ನಿಸರ್ಗ ಸ್ವ-ಸಹಾಯ ಗುಂಪಿನಿಂದ ಸಿದ್ಧಪಡಿಸಲಾದ ಶ್ಯಾವಿಗೆ ಉತ್ಪನ್ನಗಳನ್ನು ಅನಾವರಣಗೊಳಿಸಿದ ಶಾಸಕ ಸಿ.ಸಿ. ಪಾಟೀಲ, ಗ್ರಾಮೀಣ ಮಹಿಳೆಯರ ಈ ಉತ್ಪನ್ನವನ್ನು ನನ್ನಿಂದ ಅನಾವರಣಗೊಳಿಸುತ್ತಿರುವುದು ನನಗೆ ಸಂತೋಷ ತಂದಿದೆ. ಅವರ ಈ ಹೊಸ ಪ್ರಯತ್ನಕ್ಕೆ ಯಶಸ್ಸು ಸಿಗಲಿ, ಲಿಜ್ಜತ್ ಪಾಪಡ್ ಉತ್ಪನ್ನದಂತೆ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಗದಗ ಜಿಲ್ಲೆಯ ಹಳ್ಳಿ ರುಚಿ ಉತ್ಪನ್ನಗಳೂ ಸಹ ಅಭಿವೃದ್ಧಿ ಹೊಂದಲಿ. ಮುಂದಿನ ದಿನಗಳಲ್ಲಿ ಹಳ್ಳಿರುಚಿ ಉತ್ಪನ್ನಗಳ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳಿಗೆ ಮಾರುಕಟ್ಟೆ ದೊರಕಿಸಿಕೊಡುವ ಉದ್ದೇಶದಿಂದ ಗದಗ ಜಿಲ್ಲಾ ಪಂಚಾಯಿತಿಯ ಮಾರ್ಗದರ್ಶನದಲ್ಲಿ 'ಗದಗಿನ ಹಳ್ಳಿ ರುಚಿ' ಎಂಬ ವಿನೂತನ ಬ್ರಾಂಡ್‌ನ್ನು ಪರಿಚಯಿಸಲಾಗುತ್ತಿದ್ದು, ಈ ಬ್ರಾಂಡ್ ಅಡಿಯಲ್ಲಿ ಈಗಾಗಲೇ ಖಾರದ ಪುಡಿ, ಶ್ಯಾವಿಗೆ, ಶೇಂಗಾ ಎಣ್ಣೆ, ತಿಂಡಿ-ತಿನಸುಗಳು ಸೇರಿದಂತೆ ಹಲವು ಉತ್ಪನ್ನಗಳನ್ನು ತಂದು ಮಾರಾಟಕ್ಕೆ ಅನುಕೂಲ ಕಲ್ಪಿಸಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಗ್ರಾ.ಪಂ ಮಟ್ಟದ ಸಂಜೀವಿನಿ ಒಕ್ಕೂಟದ ಅಧ್ಯಕ್ಷರು ಹಾಗೂ ಸದಸ್ಯರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮದ ಮುಖಂಡರು, ತಾಲೂಕಿನ ವಿವಿಧ ಗ್ರಾಮಗಳಿಂದ ಬಂದ ಸ್ವ-ಸಹಾಯ ಗುಂಪಿನ ಮಹಿಳೆಯರು ಮತ್ತು ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿದ್ದರು.

# ಸದೃಢ ಜೀವನಕ್ಕೆ ಯೋಗಾಭ್ಯಾಸ ಅಗತ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ಯೋಗ ದಿನಾಚರಣೆಯನ್ನು ಆಯೋಜಿಸಲಾಗಿತ್ತು.

ಅತಿಥಿಗಳಾಗಿ ಆಗಮಿಸಿದ್ದ ಯೋಗ ತರಬೇತುದಾರರಾದ ಡಾ. ಸತೀಶ ಹೊಂಬಾಳೆ ಮಾತನಾಡಿ, ಯೋಗವು ಸದೃಢ ಜೀವನಕ್ಕಾಗಿ ತುಂಬಾ ಅಗತ್ಯವಾಗಿದೆ. ಯೋಗವು ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ತುಂಬಾ ಉಪಯುಕ್ತ. ಎಲ್ಲರೂ ಯೋಗ ಅಭ್ಯಾಸವನ್ನು ತಮ್ಮ ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ. ಗಂಗೂಬಾಯಿ ಪವಾರ ಮಾತನಾಡಿ, ಯೋಗವು ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕಾಗಿ ಎಲ್ಲರಿಗೂ ತುಂಬಾ ಅಗತ್ಯವಾಗಿದೆ. ಎಲ್ಲರೂ ಯೋಗ ಅಭ್ಯಾಸವನ್ನು ತಮ್ಮ ದಿನ ನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿದ್ಯಾದಾನ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಕಾರ್ಯಕ್ರಮಕ್ಕೆ ಆಗಮಿಸಿದ್ದ ಅತಿಥಿ ಮಹೋದಯರನ್ನು ಸ್ವಾಗತಿಸಿ, ಯೋಗದ ಹಿನ್ನೆಲೆ, ಅದರ ಉಪಯೋಗಗಳ ಕುರಿತು ಪ್ರಶಿಕ್ಷಣಾರ್ಥಿಗಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಿದ್ಯಾದಾನ ಸಮಿತಿಯ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾದ ಡಾ ಬಿ.ಎಸ್. ರಾಠೋಡ, ಜೆ.ಎನ್. ಕಲಾ ಮಹಾವಿದ್ಯಾಲಯದ ಉಪನ್ಯಾಸಕರು ಮತ್ತು ಯೋಗ ಗುರುಗಳಾದ ಪಿ.ಬಿ. ಬಂಡಿ, ಎಂ. ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದ ಎಲ್ಲ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು, ಎಲ್ಲ ಪ್ರಶಿಕ್ಷಣಾರ್ಥಿಗಳು ಹಾಗೂ ವಿದ್ಯಾದಾನ ಸಮಿತಿಯ ಬಾಲಕಿಯರ ಪದವಿಪೂರ್ವ ಕಾಲೇಜಿನ ಎಲ್ಲ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಪ್ರಾಯಶ್ಚಿತ್ತ, ಹರಕೆಗಾಗಿ ಮೈತುಂಬ ಹುಲಿ ವೇಷ ಬರೆಯಿಸಿಕೊಳ್ಳುವ ಸಂಪ್ರದಾಯ

# ಹುಲಿ ವೇಷದ ಗಮ್ಮತ್ತು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಿಟಿಜಿಟಿ ಮಳೆಯ ನಡುವೆಯೂ ಪಟ್ಟಣ ಸೇರಿ ತಾಲೂಕಿನೆಲ್ಲೆಡೆ ಮೊಹರಂ ಹಬ್ಬವನ್ನು ಸಂಪ್ರದಾಯಬದ್ಧವಾಗಿ ಆಚರಿಸಲು ಜನತೆ ಸನ್ನದ್ಧರಾಗಿದ್ದಾರೆ. ಮೊಹರಂ ಹಿಂದೂ-ಮುಸ್ಲಿಂ ಭಾವೈಕ್ಯದ ಹಬ್ಬವಾಗಿ ಇಂದಿಗೂ ತನ್ನ ಆಚರಣೆ, ಪರಂಪರೆ ಮತ್ತು ಸಾಂಸ್ಕೃತಿಕ ವೈಭವವನ್ನು ಉಳಿಸಿಕೊಂಡು ಬಂದಿದೆ.

ಈ ಹಬ್ಬದ ಆಚರಣೆಗೆ ಒಂದು ವಾರ ಮೊದಲಿಂದಲೇ ಎಲ್ಲೆಡೆ ಮೊಹರಂ ಹುಲಿಗಳದ್ದೇ ಅಬ್ಬರ ಕಂಡು ಬರುತ್ತಿದೆ. ಹಸೇನ-ಹುಸೇನರು ವೀರ ಸ್ವರ್ಗವನ್ನಪ್ಪಿದ ಹಿನ್ನೆಲೆಯಲ್ಲಿ ಆಚರಿಸುವ ಮೊಹರಂ ಹಬ್ಬದ ಸಂದರ್ಭದಲ್ಲಿ ನಂಬಿಕೆಯಂತೆ ಪ್ರಾಯಶ್ಚಿತ್ತ ಮತ್ತು ಹರಕೆಗಾಗಿ ಮೈತುಂಬ ಹುಲಿ ವೇಷ ಬರೆಯಿಸಿಕೊಂಡು ಹಲಗೆ ಬಾರಿಸುತ್ತಾ ನಾದಕ್ಕೆ ತಕ್ಕಂತೆ ಹುಲಿ ಕುಣಿಯುತ್ತಾರೆ. ಅಳ್ಳೊಳ್ಳಿ ಬವ್ವಾ ವೇಷದೊಂದಿಗೆ ಜನರನ್ನು ಆಕರ್ಷಿಸುತ್ತಾ ಕಾಣಿಕೆ ಸ್ವೀಕರಿಸುತ್ತಾರೆ.



ತಮ್ಮ ಮಕ್ಕಳು ಹುಲಿಯಂತೆ ಶಕ್ತಿವಂತ, ಆರೋಗ್ಯವಂತ, ಉಜ್ವಲ ಭವಿಷ್ಯಕ್ಕಾಗಿ ಮತ್ತು ಇಷ್ಟಾರ್ಥ ಸಿದ್ದಿಗಾಗಿ ಅಲ್ಲೈ ದೇವರಿಗೆ 5, 11, 21 ವರ್ಷ ಅಥವಾ ಜೀವಹುಲಿವೇಷದ ಹರಕೆ ಕಟ್ಟಿಕೊಳ್ಳುತ್ತಾರೆ. ಅದಕ್ಕಾಗಿ ಮೊಹರಂ ಹಬ್ಬದ ವೇಳೆ ಹುಲಿವೇಷ ಬರೆಸಿಕೊಳ್ಳುವ ಸಂಪ್ರದಾಯವಿದೆ.

ಹುಲಿ ವೇಷ ಬರೆಯುವಾಗ ಹಳದಿ ಬಣ್ಣದ ಮೇಲೆ ನವಿಲಿನ ಚಿತ್ರ, ಹುಲಿಯ ಚಿತ್ರ, ಕುದುರೆಯ ಚಿತ್ರ, ಹಸ್ತ, ದೇವರ ಛತ್ರಿ, ಮೀನು, ಹಾವಿನ ಚಿತ್ರಗಳನ್ನು ಸೊಗಸಾಗಿ ಬಿಡಿಸಲಾಗುತ್ತದೆ. ಕೊನೆಯಲ್ಲಿ ವೇಷಕ್ಕೆ ದೃಷ್ಟಿಯಾಗಬಾರದು ಎಂಬ ಉದ್ದೇಶದಿಂದ ಕೈಗೆ ನವಿಲುಗರಿ ಕಟ್ಟಲಾಗುತ್ತದೆ. ಈ ಒಂದೊಂದು ಚಿತ್ರಗಳೂ ಕೂಡ ಅನೇಕ ಸಂದೇಶಗಳನ್ನು ಸಾರುತ್ತವೆ. ಹಬ್ಬದ ಹಿನ್ನೆಲೆಯಲ್ಲಿ ಕಳೆದೊಂದು ವಾರದಿಂದ ಪಟ್ಟಣದಲ್ಲಿ ಹೊಸ ಬಟ್ಟೆ, ದಿನಸಿ ಸೇರಿ ಹಬ್ಬದ ವಸ್ತುಗಳ ಖರೀದಿ ಸಂಭ್ರಮ ಕಂಡುಬಂದಿತು. ಪಟ್ಟಣ ಸೇರಿ ಲಕ್ಷ್ಮೇಶ್ವರ ಪೊಲೀಸ್‌ಠಾಣಾ ವ್ಯಾಪ್ತಿಯಲ್ಲಿ 52 ಕಡೆ ನಿಗದಿತ ಸ್ಥಳದಲ್ಲಿ ಪಾಂಜಾಗಳ ಪ್ರತಿಷ್ಠಾನೆ ಮಾಡಲಾಗಿದ್ದು, ಭಾನುವಾರ ಪಾಂಜಾಗಳ ಮೆರವಣಿಗೆ ನಡೆದು ಸಂಜೆ ಹೊಳೆಗೆ ಸಾಗಿಸುವ ಸಂಪ್ರದಾಯ ನೆರವೇರಿಸಲಾಗುತ್ತದೆ.

### ಧರ್ಮೋತ್ತೇಜಕ ಸಂಗಮ ಸಮಾವೇಶದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಜೀವನದ ಉನ್ನತಿಗೆ ಸಂಸ್ಕೃತಿಯ ಅರಿವು ಮುಖ್ಯ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪ್ರಗತಿಪರವಾದ ಧ್ಯೇಯೋದ್ದೇಶಗಳು ಮಾನವನ ಶ್ರೇಯಸ್ಸಿಗೆ ದಾರಿದೀಪ. ಸತ್ಯ, ಶಾಂತಿ ಎಲ್ಲರ ಬಾಳಿಗೂ ಅಗತ್ಯವಿದೆ. ಜೀವನದ ಉನ್ನತಿಗೆ ಸಂಸ್ಕಾರ, ಸಂಸ್ಕೃತಿಗಳ ಅರಿವು, ಆಚರಣೆ ಮುಖ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ವಿಜಯನಗರದ ಶ್ರೀ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಶ್ರೀಮದ್ವೀರಶೈವ ಸದ್ಬೋಧನಾ ಸಂಸ್ಥೆ ಬೆಂಗಳೂರು ಜಿಲ್ಲಾ ಘಟಕದಿಂದ ಸಂಘಟಿಸಿದ ಧರ್ಮೋತ್ತೇಜಕ ಸಂಗಮ ಸಮಾವೇಶದ 2ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸುಖದ ಮೂಲ ಧರ್ಮಾಚರಣೆಯಲ್ಲಿದೆ. ಸಾತ್ವಿಕ ಮತ್ತು ತಾತ್ವಿಕ ಹಿತ ಚಿಂತನೆಗಳನ್ನು ಬೋಧಿಸುವುದರ ಮೂಲಕ ಭಾವೈಕ್ಯತೆಗೆ ಭದ್ರ ಬುನಾದಿ ಹಾಕಿದ ಶಕ್ತಿ ವೀರಶೈವ ಧರ್ಮದಲ್ಲಿದೆ. ಶಿವ ಸಂಸ್ಕೃತಿ ಎಷ್ಟು ಪ್ರಾಚೀನವೋ ಅಷ್ಟೇ ವೀರಶೈವ ಧರ್ಮ ಸಂಸ್ಕೃತಿ ಪುರಾತನವಾಗಿದೆ. ಮಾನವ ಪರಿಪೂರ್ಣದೆಡೆಗೆ ಪಯಣಿಸುವುದೇ ನಿಜವಾದ ಧರ್ಮ. ಶ್ರೀ ಜಗದ್ಗುರು ರೇಣುಕಾಚಾದಿ ಪಂಚಾಚಾರ್ಯರ ತತ್ವ ಸಿದ್ಧಾಂತಗಳು ನೆಮ್ಮದಿಗೆ ಮೂಲ ಸೆಲೆಯಾಗಿದೆ ಎಂದರು.



ಶ್ರೀ ಜಗದ್ಗುರು ರಂಭಾಪುರಿ ಪೀಠದ ಮುಖವಾಣಿ 'ರಂಭಾಪುರಿ ಬೆಳಗು' ಜುಲೈ ತಿಂಗಳ ಸಂಚಿಕೆಯನ್ನು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಬಿಡುಗಡೆ ಮಾಡಿ ಮಾತನಾಡಿ, ಮನಶುದ್ಧಿಗೆ ಮತ್ತು ಜೀವನ ಪರಿವರ್ತನೆಯತ್ತ ಮುನ್ನಡೆಯಲು ಉತ್ತಮ ಸಾಹಿತ್ಯದ ಅವಶ್ಯಕತೆಯಿದೆ. ಆಧ್ಯಾತ್ಮ ಜ್ಞಾನದ ಅರಿವು ಜೀವನೋತ್ಸವಕ್ಕೆ ಸ್ಫೂರ್ತಿಯಾಗಿದೆ ಎಂದರು.

ಅ.ಭಾ.ವೀ ಮಹಾಸಭಾದ ಮಹಿಳಾ ಅಧ್ಯಕ್ಷೆ ವೀಣಾ ಕಾಶಪ್ಪನವರ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಎಸ್. ಜೆ.ಆರ್.ಸಿ ಮಹಿಳಾ ವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪ್ರೇಮಾ ಸಿದ್ಧರಾಜು ಮಾತನಾಡಿ, ವೀರಶೈವ ಧರ್ಮ ಪರಂಪರೆ ಅತ್ಯಂತ ಪ್ರಾಚೀನವಾಗಿದ್ದು, ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸಿದೆ. ಕಾಯಕ ಮತ್ತು ದಾಸೋಹಕ್ಕೆ ಬಹಳಷ್ಟು ಮಹತ್ವ ಕೊಟ್ಟಿದೆ. ಈ ಧರ್ಮದ ತತ್ವ ಸಿದ್ಧಾಂತಗಳಿಗೆ ತಲೆ ಬಾಗಿ ಬರುವವರೆಲ್ಲರಿಗೂ ಬಾಗಿಲು ತೆರೆದಿದೆ ಎಂದು ತಿಳಿಸಿದರು.

ಎಡೆಯೂರು ರೇಣುಕ ಶಿವಾಚಾರ್ಯರು ನೇತೃತ್ವ ವಹಿಸಿ ಗುರುಪೀಠ ಮತ್ತು ವೀರಶೈವ ಧರ್ಮ ಪರಂಪರೆ ಬಗೆಗೆ ಸಂಕ್ಷಿಪ್ತವಾಗಿ ವಿವರಿಸಿದರು. ಧನಗೂರು ಮುಮ್ಮಡಿ ಷಡಕ್ಷರ ಶಿವಾಚಾರ್ಯರು, ಬೆಳ್ಳಾವಿ ಮಹಂತ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ಪಾಲ್ಗೊಂಡಿದ್ದರು. ಬಿಜ್ಜಳ್ಳಿ ನಂದೀಶ, ಪ್ರೇಮಾ ಕೋವಾ ರೇವಣ್ಣ, ಎಂ. ಮಾದಯ್ಯ, ನಾಗೇಂದ್ರಸ್ವಾಮಿ, ಬೀರೂರು ಶಿವಸ್ವಾಮಿ ಮೊದಲ್ಗೊಂಡು ಹಲವಾರು ಗಣ್ಯರು ಉಪಸ್ಥಿತರಿದ್ದರು.

ಟಿ.ಎಸ್. ಉಮಾಶಂಕರ ಸ್ವಾಗತಿಸಿದರು. ಪಾಲನೇತ್ರ ನಿರೂಪಿಸಿದರು. ಶಿವಶಂಕರ ಶಾಸ್ತ್ರಿ ತಂಡದವರಿಂದ ಭಕ್ತಿಗೀತೆ, ಪ್ರಜ್ಞಾ ಇವರಿಂದ ಭರತ ನಾಟ್ಯ ಜರುಗಿತು.

# ಕಂಪನಿಯಿಂದ ಕಾರ್ಮಿಕ ಕಾನೂನು ಉಲ್ಲಂಘನೆ




**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಹರಪನಹಳ್ಳಿ ನಗರದ ತಾಲೂಕು ಆಡಳಿತ ಕಚೇರಿಯ ಮುಂಭಾಗದಲ್ಲಿ ತಾಲೂಕಿನ ಕಣಿವಿಹಳ್ಳಿ ಸಮೀಪದ ಜಾಜಿಕಲ್ ಗುಡ್ಡದಲ್ಲಿ ಸುಜಲಾನ್ ಕಂಪನಿಯಲ್ಲಿ ಕೆಲಸ ನಿರ್ವಹಿಸುತ್ತಿರು ಕಾವಲುಗಾರರ ಮೇಲೆ ಅವಾಚ್ಯ ಪದಗಳಿಂದ ನಿಂದಿಸಿರುವ ಕಂಪನಿಯ ಹಿರಿಯ ಅಧಿಕಾರಿಗಳ ನಡೆಯನ್ನು ಖಂಡಿಸಿ ಶನಿವಾರ ಎಐಸಿಸಿಟಿಯು ವತಿಯಿಂದ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಐಸಿಸಿಟಿಯು ಜಿಲ್ಲಾಧ್ಯಕ್ಷ ಸಂದೇರ ಪರಶುರಾಮ, ಹಗಲು-ರಾತ್ರಿ ಎನ್ನದೆ ಸೆಕ್ಯುರಿಟಿ ಗಾರ್ಡ್‌ಗಳು ಕಳೆದ 22 ವರ್ಷಗಳಿಂದ ಕಂಪನಿಯಲ್ಲಿ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುತ್ತಾ ಬರುತ್ತಿದ್ದಾರೆ. ಅವರಿಗೆ ಸರಿಯಾಗಿ ಮೂಲ ವೇತನ ನೀಡದೆ ಕಿರುಕುಳ ನೀಡುತ್ತಿದ್ದು, ಕಾರ್ಮಿಕ ಕಾನೂನು ಉಲ್ಲಂಘನೆ ಮಾಡುತ್ತಿರುವ ಕಂಪನಿಯ ನಡೆ ಖಂಡನೀಯ ಎಂದರು.

ಯಾವುದೋ ಒತ್ತಡಗಳಿಂದ ಸೆಕ್ಯುರಿಟಿ ಗಾರ್ಡ್‌ಗಳನ್ನು ಏಕಾಏಕಿ ಕೆಲಸದಿಂದ ತೆಗೆದು ಹಾಕಲು ನೋಟೀಸ್ ಜಾರಿ ಮಾಡಿದ್ದಾರೆ. ಇವರನ್ನೇ ನಂಬಿಕೊಂಡ ಕುಟುಂಬ ವರ್ಗದವರಿಗೆ ಕಂಪನಿಯು ಅನ್ಯಾಯ ಮಾಡುತ್ತಿದೆ. ಕಂಪನಿಯು ಕಾರ್ಮಿಕ ಕಾನೂನು ರಕ್ಷಣೆ ಮಾಡಬೇಕು ಎಂದರು.

ಮುಖಂಡರಾದ ಗುಳೇದಹಟ್ಟಿ ಸಂತೋಷ, ಹುಲಿಕಟ್ಟಿ ಮೈಲಪ್ಪ, ದ್ವಾರಕೇಶ್, ಸೆಕ್ಯುರಿಟಿ ಗಾರ್ಡ್‌ಗಳಾದ ಬಸವರಾಜ, ಮೇಘರಾಜ, ಕೆ. ಪರಮೇಶ್ ನಾಯ್ಕ, ಪ್ರಕಾಶ್ ನಾಯ್ಕ ಇತರರಿದ್ದರು.




ಲಕ್ಷ್ಮೇಶ್ವರ ತಹಸೀಲ್ದಾರರಾಗಿ ಸೇವೆ ಸಲ್ಲಿಸಿ ಬಾಗಲಕೋಟೆಗೆ ವರ್ಗಾವಣೆಗೊಂಡ ತಹಸೀಲ್ದಾರ ವಾಸುದೇವ ವಿ.ಸ್ವಾಮಿ ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು. ಅಧಿಕಾರ ಸ್ವೀಕರಿಸಿದ ನೂತನ ತಹಸೀಲ್ದಾರ ಎಂ.ಧನಂಜಯ, ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಉಪನೋಂದಣಾಧಿಕಾರಿ ಎಸ್.ಕೆ. ಜಲರೆಡ್ಡಿ, ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ, ಮಹೇಶ ಹಡಪದ, ಕರಾಸನೌಸಂಘ ತಾಲೂಕ ಅಧ್ಯಕ್ಷ ಗುರುರಾಜ ಹವಳದ, ಹೆಸ್ಕಾಂ ಅಧಿಕಾರಿ ಆಂಜನಪ್ಪ ಬಿ, ಎಂ.ಎಸ್. ಸಂಕನೂರ, ಮಲ್ಲಿಕಾರ್ಜುನ ಪಾಟೀಲ, ಈಶ್ವರ ಮೆಡ್ಲೇರಿ, ಮಂಜುನಾಥ ಕೊಕ್ಕರಗುಂದಿ, ಮಂಜುನಾಥ ಚಾಕಲಬ್ಬಿ, ಮಂಜುನಾಥ ಮುದಗಲ್, ಉಮೇಶ ನೇಕಾರ, ಸತೀಶ ಬೋಮಲೆ, ಕಿರಣ ಪಮ್ಮಾರ ಸೇರಿ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ಕೆರೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಗದಗ ಮತಕ್ಷೇತ್ರದ ಮಲ್ಲಸಮುದ್ರ ಗ್ರಾಮದ ಕೆರೆ ಅಭಿವೃದ್ಧಿ ಕಾಮಗಾರಿಗೆ ರಾಜ್ಯದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಶನಿವಾರ ಭೂಮಿ ಪೂಜೆ ನೆರವೇರಿಸಿದರು.

ಮಲ್ಲಸಮುದ್ರ ಗ್ರಾಮದ ಕೆರೆ ಅಭಿವೃದ್ಧಿಗೆ ್ನ ಸರ್ಕಾರ 62 ಲಕ್ಷ ರೂ. ಅನುದಾನ ಒದಗಿಸಿದೆ. ಈ ಅನುದಾನ ಸದ್ಬಳಕೆ ಮಾಡಿಕೊಂಡು ಕೆರೆ ಅಭಿವೃದ್ಧಿಪಡಿಸುವ ಮೂಲಕ ಅಂತರ್ಜಲ ವೃದ್ಧಿಗೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.



ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಪ್ರಭು ಬುರಬುರೆ, ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ರವಿ ಮೂಲಿಮನಿ, ಫಾರೂಕ್ ಹುಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಅನುಮಾನಕ್ಕೆ ದಾರಿಯಾದ ಪಟ್ಟಣ ಪಂಚಾಯಿತಿ ಜನಪ್ರತಿನಿಧಿಗಳ, ಅಧಿಕಾರಿಗಳ ನಡೆ**

# ಕ್ಷಮಿಸಿ, ಇಲ್ಲಿನ ಸಭೆಗೆ ಮಾಧ್ಯಮದವರಿಗೆ ಪ್ರವೇಶವಿಲ್ಲ!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸ್ಥಳೀಯ ಪಟ್ಟಣ ಪಂಚಾಯಿತಿ ಕಚೇರಿಯಲ್ಲಿ ಕಡತಗಳ ನಿರ್ವಹಣೆಯಲ್ಲಿ ವ್ಯತ್ಯಾಸ, ವ್ಯಾಪಕ ಭ್ರಷ್ಟಾಚಾರ ನಡೆದಿದ್ದು, ಕೋಟ್ಯಾಂತರ ರೂ ಹಣ ಪೋಲಾಗುತ್ತಿದೆ ಎಂದು ಸಾರ್ವಜನಿಕರು ಹಾಗೂ ವಿಪಕ್ಷದವರು ಆರೋಪ ಮಾಡುತ್ತಿದ್ದಾರೆ. ಇದಕ್ಕೆ ಪುಷ್ಟಿ ನೀಡುವಂತೆ ಪ.ಪಂ ಭವನದಲ್ಲಿ ಅಧ್ಯಕ್ಷ ಫಕೀರಪ್ಪ ಮಳ್ಳಿಯವರ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ನಡೆದ ಸಾಮಾನ್ಯ ಸಭೆಗೆ ಮಾಧ್ಯಮದವರನ್ನು ದೂರವಿಟ್ಟು ಸಭೆ ನಡೆಸುವ ಮೂಲಕ ಹಲವು ಅನುಮಾನಕ್ಕೆ ಎಡೆಮಾಡಿದೆ.

ಇಷ್ಟು ವರ್ಷ ಎಷ್ಟೇ ಸಾಮಾನ್ಯ ಸಭೆ ನಡೆದರೂ ಮಾಧ್ಯಮದವರನ್ನು ಆಹ್ವಾನಿಸಲಾಗುತ್ತಿತ್ತು. ಆದರೆ ಇತ್ತೀಚೆಗೆ ನಡೆದ ಸಭೆಗೆ ಮಾಧ್ಯಮದವರನ್ನು ಹೊರಗಿಡುವ ಮೂಲಕ ಸಭೆಯಲ್ಲಿ ನಡೆಯುವ ವಿಷಯಗಳು ಜನತೆಗೆ ತಲುಪಬಾರದು ಎಂಬ ಧೋರಣೆ ಅನುಸರಿಸಿದಂತಾಗಿದೆ. ಆಡಳಿತ ಯಂತ್ರದಲ್ಲಿ ಪಾರದರ್ಶಕತೆ ಕಂಡುಕೊಳ್ಳುವ ನಿಟ್ಟಿನಲ್ಲಿ ಸ್ಥಳೀಯ ಆಡಳಿತ ಸಂಪೂರ್ಣ ವಿಫಲವಾಗಿದೆ. ಸರ್ವ ಪಕ್ಷ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ತಮ್ಮಿಷ್ಟದಂತೆ ಆಡಳಿತ ನಡೆಸುತ್ತಿರುವುದು ಖಂಡನೀಯ ಎಂದು ವಿರೋಧ ಪಕ್ಷದ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಆಡಳಿತಕ್ಕೆ ನಡೆಸುವವರಿಗೆ ಪಟ್ಟಣದ ಅಭಿವೃದ್ಧಿ ಬೇಕಾಗಿಲ್ಲ. ಸಭೆಯಲ್ಲಿ ವಿರೋಧ ಪಕ್ಷದವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಜತೆಗೆ ಸಭೆಗೆ ಮಾಧ್ಯಮದವರಿಗೆ ಆಹ್ವಾನ ನೀಡದೆ ಕೆಲ ಪಟ್ಟಭದ್ರ ಹಿತಾಸಕ್ತಿಗೆ ಪಟ್ಟಣ ಅಭಿವೃದ್ಧಿಯತ್ತ ಚಿತ್ತ ಹರಿಸದೆ ಬೇಕಾಬಿಟ್ಟಿ ಆಡಳಿತ ನಡೆಸುತ್ತಿದ್ದಾರೆ ಎಂದು ವಿಪಕ್ಷ ಸದಸ್ಯ ಮಲ್ಲಿಕಾರ್ಜುನಗೌಡ ಭೂಮಗೌಡ್ರ ದೂರಿದರು.

ತಮಗೆ ಇಷ್ಟ ಬಂದಾಗ ಸಭೆ ಕರೆಯುತ್ತಿರುವುದು ಹಲವು ಗುಮಾನಿಗಳಿಗೆ ಎಡೆಮಾಡಿ ಕೊಟ್ಟಿದೆ. ಇನ್ನೊಂದೆಡೆ, ಹಿಂದಿನ ಸಾಮಾನ್ಯ ಸಭೆಯಲ್ಲಿ ಮಂಡನೆಯಾದ ಕೆಲ ವಿಷಯಗಳು ಜನರ ವ್ಯಾಪಕ ಚರ್ಚೆಗೆ ಗ್ರಾಸವಾಗಿದ್ದವು. ಕೆಲ ಸದಸ್ಯರು ಕೇಳಿದ ಪ್ರಶ್ನೆಗಳಿಗೆ ಉತ್ತರ ನೀಡಿರಲಿಲ್ಲ. ಇಂತಹ ವಿಷಯಗಳ ಪ್ರಶ್ನೆ ಕೇಳುತ್ತೇವೆ ಎನ್ನುವ ಕಾರಣಕ್ಕೆ ನೆಪಕ್ಕೆ ಮಾತ್ರ ನಮಗೆ ಆಹ್ವಾನ ನೀಡಿದಂತಿದೆ. ಪತ್ರಕರ್ತರನ್ನು ದೂರವಿಟ್ಟು ಸಭೆ ಮಾಡಿದ್ದಾರೆ ಎಂದು ಸದಸ್ಯೆ ಜ್ಯೋತಿ ಪಾಯಪ್ಪಗೌಡ್ರ ಆರೋಪಿಸಿದರು.

ನಾನು ಪ್ರಶ್ನೆ ಮಾಡುತ್ತೇನೆ ಎನ್ನುವ ಕಾರಣಕ್ಕೆ ನನ್ನನ್ನು ಸಾಮಾನ್ಯ ಸಭೆಯಿಂದ ಅಲ್ಲಗಳೆದಿದ್ದಾರೆ ಹಾಗೂ ಭ್ರಷ್ಟಾಚಾರ ಮುಚ್ಚಿಕೊಳ್ಳಲು ಮಾಧ್ಯಮದವರನ್ನು ದೂರವಿಟ್ಟು ಸಾಮಾನ್ಯ ಸಭೆ ಮಾಡಿದ್ದಾರೆ ಎಂದು ಪ.ಪಂ 9ನೇ ವಾರ್ಡ್ ಸದಸ್ಯೆ ಜ್ಯೋತಿ ಪಾಯಪ್ಪಗೌಡ್ರ ಆರೋಪಿಸಿದರು.

ಪಾರದರ್ಶಕತೆ ಕಂಡುಕೊಳ್ಳುವ ನಿಟ್ಟಿನಲ್ಲಿ ಸ್ಥಳೀಯ ಆಡಳಿತ ಸಂಪೂರ್ಣ ವಿಫಲವಾಗಿದೆ.

ಸಾಮಾನ್ಯ ಸಭೆಯಲ್ಲಿ ನಡೆಯುವ ವಿಷಯಗಳು ಜನತೆಗೆ ತಲುಪಬಾರದು ಎಂಬ ಧೋರಣೆ ಆಡಳಿತದ್ದಾಗಿದೆ ಎಂದು ಪ.ಪಂ 3ನೇ ವಾರ್ಡ್ ಸದಸ್ಯ ಮಲ್ಲಿಕಾರ್ಜುನಗೌಡ ಭೂಮಗೌಡ್ರ ಪ್ರತಿಕ್ರಿಯಿಸಿದರು.




### ಆರೋಪ–ಪ್ರತ್ಯಾರೋಪ

ಮಾಧ್ಯಮದ ಸ್ವಾತಂತ್ರ್ಯವು ಮೂಲಭೂತ ತತ್ವವಾಗಿದ್ದು, ಮುದ್ರಿತ ಮತ್ತು ವಿದ್ಯುನ್ಮಾನ ಮಾಧ್ಯಮಗಳು, ವಿಶೇಷವಾಗಿ ಪ್ರಕಟಿತ ವಸ್ತುನಿಷ್ಠ ಸುದ್ದಿಗಳು ಸೇರಿದಂತೆ ವಿವಿಧ ಮಾಧ್ಯಮಗಳ ಮೂಲಕ ಸಂವಹನ ಮತ್ತು ಅಭಿವ್ಯಕ್ತಿಯನ್ನು ಮುಕ್ತವಾಗಿ ಚಲಾಯಿಸುವ ಹಕ್ಕನ್ನು ಹೊಂದಿದೆ. ಆದರೆ ಸಾಮಾನ್ಯ ಸಭೆಯಿಂದ ಪತ್ರಕರ್ತರನ್ನು ದೂರವಿಟ್ಟು ನಡೆಸುವ ಮೂಲಕ ತಮ್ಮ ಅವ್ಯವಹಾರ, ಕರ್ಮಕಾಂಡ ಮುಚ್ಚಿಕೊಳ್ಳುವ ಪ್ರಯತ್ನಕ್ಕೆ ಈಗಿನ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ ಹಾಗೂ ಕೆಲವು ಸದಸ್ಯರು ಮುಂದಾಗಿದ್ದಾರೆ ಎನ್ನುವ ಆರೋಪ ಸಾರ್ವಜನಿಕ ವಲಯದಿಂದ ಬಲವಾಗಿ ಕೇಳಿಬರುತ್ತಿದೆ. ಈ ಬಗ್ಗೆ ಒಬ್ಬರ ಮೇಲೊಬ್ಬರು ಆರೋಪ, ಪ್ರತ್ಯಾರೋಪ ಮಾಡಿಕೊಳ್ಳುತ್ತಿದ್ದಾರೆ.



ಪತ್ರಕರ್ತರನ್ನು ಆಹ್ವಾನಿಸಬೇಡವೆಂದು ನಾನು ಎಲ್ಲೂ ಹೇಳಿಲ್ಲ. ಆದರೆ ಮುಖ್ಯಾಧಿಕಾರಿಗಳೇ ಪತ್ರಕರ್ತರು ಒಂದಕ್ಕೆ ಎರಡು ಬರೆಯುತ್ತಾರೆ, ಹಾಗಾಗಿ ಬೇಡವೆಂದು ಹೇಳಿದರು.

**– ಫಕೀರಪ್ಪ ಮಳ್ಳಿ, ನರೇಗಲ್ ಪ.ಪಂ ಅಧ್ಯಕ್ಷ.**



ಪ್ರತಿಬಾರಿಯಂತೆ ಮುಖ್ಯಾಧಿಕಾರಿ ಹಾಗೂ ಸಿಬ್ಬಂದಿಗಳು ಅವರವರ ಜವಾಬ್ದಾರಿಗಳನ್ನು ಅರಿತು ಕೆಲಸ ಮಾಡುತ್ತಾರೆ ಹಾಗೂ ಪತ್ರಕರ್ತರನ್ನು ಆಹ್ವಾನಿಸುತ್ತಾರೆ ಎಂದುಕೊಂಡು ಸುಮ್ಮನಿದ್ದೆ. ಆದರೆ ಸಭೆ ಮುಗಿದ ಬಳಿಕವೇ ಪತ್ರಕರ್ತರಿಗೆ ಆಹ್ವಾನ ನೀಡಿಲ್ಲವೆನ್ನುವುದು ಗೊತ್ತಾಗಿದ್ದು.

**– ಕುಮಾರಸ್ವಾಮಿ ಕೋರಧಾನ್ಯಮಠ,**



ಪತ್ರಕರ್ತರನ್ನು ಸಭೆಗೆ ಆಹ್ವಾನಿಸುವ ಬಗ್ಗೆ ಅಧ್ಯಕ್ಷರ ಗಮನಕ್ಕೆ ತಂದಾಗ, ಅವರು ಇದೇನು ಮುಗಿದು ಹೋಗುತ್ತದೆ, ಮುಂದೆ ಕರೆಯಬಹುದು. ಈ ಸಭೆ ಮುಗಿದ ಬಳಿಕ ನಾನೇ ಪತ್ರಿಕಾ ಹೇಳಿಕೆ ಕೊಡುತ್ತೇನೆ. ಹೀಗಾಗಿ ಆಹ್ವಾನಿಸುವುದು ಬೇಡವೆಂದು ನಮಗೆ ಹೇಳಿದರು.

**– ಮಹೇಶ ಬಿ.ನಿಡಶೇಶಿ. ಪ.ಪಂ ಮುಖ್ಯಾಧಿಕಾರಿ.**

## ‘ತಾಯಿಯ ಹೆಸರಲ್ಲಿ ಒಂದು ವೃಕ್ಷ’ ಅಭಿಯಾನ




■ವಿಜಯಸಾಕ್ಷಿ ಸುದ್ದಿ, ಗದಗ

ಮೇರಾ ಯುವ ಭಾರತ ಗದಗ, ಕೆ.ಎಚ್. ಪಾಟೀಲ್ ವಿದ್ಯಾಮಂದಿರ ಹುಲಕೋಟಿ ಹಾಗೂ ಯೂಥ್ ಫಾರ್ ಚೇಂಜ್ ಆರ್ಗನೈಜೇಷನ್ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ತಾಯಿಯ ಹೆಸರಲ್ಲಿ ಒಂದು ವೃಕ್ಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ಜಿ.ಆರ್. ಪಾಟೀಲ್, ನಮ್ಮ ತಾಯಿ ನಮ್ಮನ್ನು ಪ್ರೀತಿಸುವಂತೆ ಪ್ರಕೃತಿ ಮಾತೆ ಕೂಡ ನಮ್ಮನ್ನು ಕಾಳಜಿ ವಹಿಸಿ ನಮಗೆ ಸಹಾಯ ಮಾಡುತ್ತದೆ. ಇದಕ್ಕಾಗಿ ತಾಯಿಯ ಹೆಸರಲ್ಲಿ ಒಂದು ವೃಕ್ಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಹವಾಮಾನ ಬದಲಾವಣೆ ಕಾರಣದಿಂದ ಕೃಷಿ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಈಗಾಗಲೇ ಹಲವು ಸಂಕಷ್ಟಗಳು ಆರಂಭವಾಗಿದೆ. ಇದರ ನಿಯಂತ್ರಣಕ್ಕೆ ಇಂತಹ ಅಭಿಯಾನಗಳು ನಿರಂತರವಾಗಿ ನಡೆಯಬೇಕಿದೆ. ಶಾಲೆಯ ಆವರಣಗಳಲ್ಲಿ ಹಣ್ಣಿನ ಗಿಡಗಳನ್ನು ನೆಡುವ ಮೂಲಕ ಪರಿಸರ ಪೂರಕವಾದ ವಾತಾವರಣ ಸೃಷ್ಟಿಸಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ರವಿ ಹೊಂಬಾಳಿ, ಪ್ರಧಾನಿ ಕೊಂಚಿಗೇರಿ ಮುಂತಾದವರು ಭಾಗವಹಿಸಿದ್ದರು.

## ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಕಾರ್ಯ ಶ್ಲಾಘನೀಯ: ಅಪ್ಪಣ್ಣ ಇನಾಮತಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರ ಸ್ವಾವಲಂಬನೆ ಬದುಕಿನಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಪಾತ್ರ ಮಹತ್ವದ್ದು ಎಂದು ಕುರ್ತಕೋಟಿ ಗ್ರಾಮ ಪಂಚಾಯತಿ ಅಧ್ಯಕ್ಷ ಅಪ್ಪಣ್ಣ ಇನಾಮತಿ ಹೇಳಿದರು.

ಅವರು ತಾಲೂಕಿನ ಹರ್ತಿ ವಲಯದ ಕುರ್ತಕೋಟಿ ಕಾರ್ಯಕ್ಷೇತ್ರದಲ್ಲಿ ಶ್ರದ್ಧಾಜ್ಞಾನ ವಿಕಾಸ ಕೇಂದ್ರದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಶಿಸ್ತಿನ ಕಾರ್ಯಕ್ರಮಗಳ ಬಗ್ಗೆ ಹಾಗೂ ಸದಸ್ಯರಿಗೆ ಆರ್ಥಿಕ ಸ್ವಾವಲಂಬನೆ ಬದುಕಿಗೆ ಕಡಿಮೆ ಬಡ್ಡಿಯಲ್ಲಿ ಸದಸ್ಯರಿಗೆ ಸಾಲ ಕೊಡುವುದರಿಂದ ಸದಸ್ಯರು ತುಂಬಾ ಬದಲಾವಣೆ ಆಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಕಾರ್ಯಕ್ರಮ ಉದ್ಘಾಟಿಸಿದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ತಾಲೂಕು ಯೋಜನಾಧಿಕಾರಿ ಶ್ರೀಮತಿ ಉಮಾ ಅವರು ಮಾತನಾಡಿ, ಕೇಂದ್ರದ ಸದಸ್ಯರಿಗೆ ಜ್ಞಾನ ವಿಕಾಸ ಕಾರ್ಯಕ್ರಮಗಳ ಬಗ್ಗೆ ಕುಟುಂಬದ ಮಹತ್ವ ಮತ್ತು ಪೌಷ್ಟಿಕ ಆಹಾರದ ಸೇವನೆ ಬಗ್ಗೆ ಎಲ್ಲಾ ಸದಸ್ಯರಿಗೆ ಮಾಹಿತಿ ನೀಡಿದರು.

ಅಂತೂರು-ಬೆಂತೂರ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯರಾದ ದೊಡ್ಡಣ್ಣವರ ಮಾತನಾಡಿ, ಎಲ್ಲಾ ಸದಸ್ಯರಿಗೂ ಸಾಧಕ ಮಹಿಳೆಯರ ಬಗ್ಗೆ ಮಾಹಿತಿ ನೀಡಿದರು.

ಈ ಕಾರ್ಯಕ್ರಮದಲ್ಲಿ ನೀಲಮ್ಮ ಕಾಶಿಮಠ, ವಲಯದ ಮೇಲ್ವಿಚಾರಕರಾದ ಶಾಂತ ಮೂರ್ತಿ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಗಂಗಮ್ಮ, ಸೇವಾ ಪ್ರತಿನಿಧಿ ರೇಣುಕಾ ಹಾಗೂ ಕೇಂದ್ರದ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು.

ನಂತರ ಕೇಂದ್ರದ ಸದಸ್ಯರು ಸಾಂಸ್ಕೃತಿಕ ಹಾಗೂ ಆಟೋಟ ಸ್ಪರ್ಧೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಸುನಿತಾ ಈಳಿಗೇರ ಕಾರ್ಯಕ್ರಮ ನಿರೂಪಿಸಿದರು. ಶೋಭಾ ಕಪ್ಪರಶೆಟ್ಟಿ ವಂದಿಸಿದರು.

**ವಿಶೇಷ ದಾಖಲಾತಿ ಆಂದೋಲನದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟಪ್ಪನವರ ಕರೆ**

## ಮಕ್ಕಳನ್ನು ನಿರಂತರ ಪ್ರೋತ್ಸಾಹಿಸಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರು ಮಕ್ಕಳನ್ನು ನಿರಂತರ ಪ್ರೋತ್ಸಾಹಿಸುವುದರೊಂದಿಗೆ ಧೈರ್ಯ ಹಾಗೂ ಪ್ರೀತಿಯನ್ನು ತುಂಬಿ ತರಗತಿಯ ಬೋಧನೆಯಲ್ಲಿ ಸ್ಪಷ್ಟ ನಿಯಮಗಳು, ನಿರಂತರ ಕ್ರಿಯೆ-ಪ್ರತಿಕ್ರಿಯೆ ಹಾಗೂ ಧನಾತ್ಮಕವಾದ ಕ್ರಿಯೆಗಳನ್ನು ಅನುಸರಿಸಿ ಮಕ್ಕಳ ವಯಕ್ತಿಕ ಅಗತ್ಯತೆಗಳನ್ನು ಗುರುತಿಸಿ, ವಿಶೇಷಚೇತನ ಮಕ್ಕಳಗೆ ಅಗತ್ಯವಿದ್ದಲ್ಲಿ ಸಹಕಾರ ಹಾಗೂ ಸಹಾಯ ಕಲ್ಪಿಸಬೇಕೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟಪ್ಪನವರ ಹೇಳಿದರು.

ಅವರು ಶನಿವಾರ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಗದುಗಿನ ಹಿರಿಯ ಪ್ರಾಥಮಿಕ ಶಾಲೆ ನಂ. 15ರಲ್ಲಿ ಜರುಗಿದ ವಿಶೇಷ ದಾಖಲಾತಿ ಆಂದೋಲನದಲ್ಲಿ ವಿಶೇಷ ಮಗುವನ್ನು ಶಾಲೆಗೆ ದಾಖಲಿಸಿ ಮಾತನಾಡಿದರು.

ವಿಶೇಷ ಮಕ್ಕಳ ದಿನಂಪ್ರತಿ ಕಾರ್ಯಚಟುವಟಿಕೆಗಳಿಗೆ ಪಾಲಕರು, ಶಿಕ್ಷಕರು ಹೆಚ್ಚಿನ ಗಮನ ಹರಿಸಿ ಅವರ ಬೆಂಗಾವಲಾಗಿ ನಿಲ್ಲಬೇಕು. ಸಮಯ ಪಾಲನೆ, ಮಕ್ಕಳ ಆರೋಗ್ಯ ಶೈಕ್ಷಣಿಕ ಅಭಿವೃದ್ಧಿಯು ವಿಶೇಷ ಮಕ್ಕಳಿಗೆ ಅವಶ್ಯವಿದ್ದು ಅದು ಮಕ್ಕಳಿಗೆ ಸಮರ್ಪಕವಾಗಿ ತಲುಪುವಂತೆ ನಾವೆಲ್ಲರೂ ಕಾಳಜಿ ವಹಿಸಬೇಕಿದೆ ಎಂದರು.




ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡಿ, ವಿಶೇಷ ಮಕ್ಕಳಿಗೆ ಪ್ರೋತ್ಸಾಹ ಹಾಗೂ ಪ್ರಶಂಸೆ ಬಹು ಮುಖ್ಯವಾದುದು. ಮಕ್ಕಳ ಕೆಲವೊಂದು ಅತೀರೇಕದ ಹಾಗೂ ಅನಗತ್ಯ ವರ್ತನೆಗಳನ್ನು ತಿದ್ದಲು ನಾವು ಅವರ ಧನಾತ್ಮಕ ಕೆಲಸಗಳಿಗೆ ಬೆಂಬಲ ನೀಡುವುದರ ಮೂಲಕ ಸರಿ-ತಪ್ಪು ತಿಳುವಳಿಕೆಯನ್ನು ನೀಡಬೇಕು. ಮುಖ್ಯವಾಗಿ ಈ ಮಕ್ಕಳ ಭಾವನೆಗಳನ್ನು ತಿಳಿದುಕೊಂಡು ಅವುಗಳಿಗೆ ಬೆಲೆಕೊಟ್ಟು

ಪ್ರಾಸ್ತಾವಿಕವಾಗಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ವಿಶೇಷ ಮಕ್ಕಳ ಪಾಲನೆಯಲ್ಲಿ ಪಾಲಕರ ಜವಾಬ್ದಾರಿ ದೊಡ್ಡದು. ಶಿಕ್ಷಕರೊಂದಿಗೆ ಪಾಲಕರು ಕೈಜೋಡಿಸಿದಾಗ ಮಕ್ಕಳ ಶೈಕ್ಷಣಿಕ ಸಾಧನೆಗಳು, ಸಾಮಾಜಿಕ ಬೆಳವಣಿಗೆಯು ಪ್ರಗತಿಯತ್ತ ಸಾಗುತ್ತದೆ. ಮಕ್ಕಳ ನ್ಯೂನ್ಯತೆಗಳನ್ನು ತಿಳಿದು ಬೋಧನೆಗೆ ಇಳಿದಾಗ ಮಕ್ಕಳಲ್ಲಿ ಕಲಿಕೆ ಕಂಡು ಬರುತ್ತದೆ ಎಂದರು.

ವಿಶೇಷಚೇತನ ಮಗು ಕೃಷ್ಣಪ್ರಿಯಾ ಬದಿ ಪ್ರಾರ್ಥಿಸಿದರು. ಮುಖ್ಯೋಪಾಧ್ಯಾಯೆ ವಿ.ಎನ್. ಬಸಾಪೂರ ಸ್ವಾಗತಿಸಿದರು. ಪಿ.ಎಸ್. ಬ್ಯಾಳಿ ನಿರೂಪಿಸಿದರು. ಬಿ. ಯಶೋಧಾ ವಂದಿಸಿದರು. ವ್ಹಿ.ಬಿ. ಕರಬಸಗೌಡ್ರ, ಮೀನಾಕ್ಷಿ ಕೊರವನವರ, ಗೀತಾ ಹಾಸಲಕರ್, ಪಾಲಕರು-ಪೋಷಕರು ಉಪಸ್ಥಿತರಿದ್ದರು.

## ಶಾಲಾ ಸಂಸತ್ತು ರಚನೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರಲ್ಲಿ 2025/26ನೇ ಸಾಲಿನ ಶಾಲಾ ಸಂಸತ್ತು ರಚನೆ ಮಾಡಲಾಯಿತು.

ಪ್ರಧಾನ ಮಂತ್ರಿಯಾಗಿ ಮಹ್ಮದಾದಿಲ್ ಮಾಣಿಕಬಾಯಿ, ಉಪಪ್ರಧಾನ ಮಂತ್ರಿಯಾಗಿ ಮನೋಜ ಸಿದ್ದನಗೌಡರ, ಶಿಕ್ಷಣ ಮಂತ್ರಿ ಜ್ಯೋತಿ ಸಂಶಿ, ಪ್ರವಾಸ ಮತ್ತು ಕಾನೂನು ಮಂತ್ರಿ ಹರೀಶ ಜಾಧಾವ, ಬಿಸಿ ಊಟ ಮಂತ್ರಿ ಅಭಯ ಗಾಯಕವಾಡ, ನೀರಾವರಿ ಮಂತ್ರಿ ಪ್ರದೀಪ ಬಸಿಡೋಣಿ, ಸಂಸ್ಕೃತಿಕ ಮಂತ್ರಿ ತಮನ್‌ತಾಜ್ ಖಲೀಪನವರ, ಪ್ರರ್ಥನಾ ಮಂತ್ರಿ ಅಮಿತ ಅಳಗವಾಡಿ, ಕ್ರೀಡಾ ಮಂತ್ರಿ ಮಹ್ಮದ ಹನೀಫ್ ಎಳವತ್ತಿ, ಅರಣ್ಯ ಮಂತ್ರಿ ಪೂಜಾ ಮಡೆಪ್ಪನವರ, ಆರೋಗ್ಯ ಮಂತ್ರಿ ಅಮೃತಾ ಕರಿಗಾರ, ಸ್ವಚ್ಛತಾ ಮಂತ್ರಿಯಾಗಿ ತೈಸಿನ ದುರ್ಗಿಗುಡಿ ಆಯ್ಕೆಯಾದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಶಿಕ್ಷಕರಾದ ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್ಲ, ಮಂಜುನಾಥ ಕಲ್ಯಾಣಮಠ, ಎಸ್. ಎಚ್. ಉಪ್ಪಾರ, ಎಚ್.ಆರ್. ಭಜಂತ್ರಿ, ಟಿ.ವೀಣಾ, ವಿ.ಎಂ. ಕಂಠಿ, ಎಸ್.ವಿ. ಹಿರೇಮಠ, ಎಸ್.ಡಿ. ಪಂಡಿತ, ರೇಣುಕಾ ಪರ್ವತಗೌಡರ, ಕವಿತಾ ಬಿನ್ನಾಳ, ರಾಧಾ ಬಾತಾಖಾನಿ, ಶಬಾನಾ ಅಬ್ಬುನವರ ಇದ್ದರು.

## ಹೊರಗುತ್ತಿಗೆ ನೌಕರರಿಂದ ಅಸಹಕಾರ ಚಳುವಳಿ

■ವಿಜಯಸಾಕ್ಷಿ ಸುದ್ದಿ, ಗದಗ

6 ತಿಂಗಳಿಂದ ವೇತನ ಪಾವತಿಯಾಗದ ಕಾರಣ ಜುಲೈ 8ರಿಂದ ಎಲ್ಲ ನರೇಗಾ ಕಾರ್ಯಗಳನ್ನು ಸ್ಥಗಿತಗೊಳಿಸಿ ಅಸಹಕಾರ ಚಳುವಳಿ ನಡೆಸಲಿದ್ದೇವೆ ಎಂದು ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ತಾಲೂಕು ವ್ಯಾಪ್ತಿಯ ಹೊರಗುತ್ತಿಗೆ ನೌಕರರು ಶನಿವಾರ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಅವರಿಗೆ ಮನವಿ ಸಲ್ಲಿಸಿದರು.



ಕೂಲಿಕಾರರಿಗೆ ನರೇಗಾ ಕೆಲಸ ಕೊಡಿಸುವುದು ಸೇರಿದಂತೆ ಯೋಜನೆಯಡಿ ಹಳ್ಳಿಗಳಲ್ಲಿ ಆಸ್ತಿ ಸೃಜನೆಗಳಲ್ಲಿ ನರೇಗಾ ನೌಕರರ ಪಾತ್ರ ಬಹುಮುಖ್ಯವಾಗಿದೆ. ಆದರೆ, ನೌಕರರಿಗೆ ಪ್ರತಿ ತಿಂಗಳು ವೇತನ ಸರಿಯಾಗಿ ಆಗದೆ ಸಮಸ್ಯೆ ಎದುರಿಸುತ್ತಿದ್ದಾರೆ. ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ತಾಲೂಕು ಹಂತದಲ್ಲಿ ಟಿಐಇಸಿ, ಟಿಸಿ, ಟಿಎಂಐಎಸ್, ಟಿಎಇ (ಸಿವಿಲ್, ತೋಟಗಾರಿಕೆ, ರೇಷ್ಮೆ, ಅರಣ್ಯ, ಕೃಷಿ) ವಿಭಾಗದಲ್ಲಿ ಹಾಗೂ ಬಿಎಫ್‌ಟಿ ಸೇರಿ ವಿವಿಧ ಹುದ್ದೆಗಳಲ್ಲಿ 25ಕ್ಕೂ ಹೆಚ್ಚು ಜನ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಎಲ್ಲ ಸಿಬ್ಬಂದಿಗೆ ಕಳೆದ 6 ತಿಂಗಳಿಂದ ವೇತನ ಪಾವತಿಯಾಗಿಲ್ಲ. ಸರ್ಕಾರ ಕೂಡಲೇ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಮನವಿಯಲ್ಲಿ ತಿಳಿಸಿದರು.

ಸಂಘದ ತಾಲೂಕು ಪ್ರತಿನಿಧಿಗಳಾದ ವೀರೇಶ ಬಸನಗೌಡ್ರ, ಚಂದ್ರಶೇಖರ ಹಳ್ಳಿ, ನವೀನ ಬಸರಿ, ಪ್ರದೀಪ ನರೇಗಲ್ಲ, ಮಂಜುನಾಥ ಕುಲಕರ್ಣಿ, ಸೋಮಶೇಖರ ತುರಬಿನ, ಸಿದ್ದಪ್ಪ ಸೋಮನಕಟ್ಟಿ ಇತರರು ಇದ್ದರು.

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/713 ದಿನಾಂಕ: 04-07-2025

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಇಂದ್ರಕುಮಾರ ತಂದೆ ಮುಲ್ತಾನಮಲಜಿ ಬಾಫಣಾ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಾಣಿಜ್ಯ ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಹಾಗೂ ಹಲವರಿಗೆ ಉದ್ಯೋಗ ದೊರಕುತ್ತವೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ **14(ಎ)** ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಗದಗ | 141/*/3 | 02ಎಕರೆ-00ಗುಂಟೆ | ವಸತಿ | ವಾಣಿಜ್ಯ |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/158/ದೇಶಪಾಂಡೆಪಬ್ಲಿಸಿಟಿ/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka